24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 126 | ನವದೆಹಲಿ | ಬೆಲೆ ₹10 | ನವೆಂಬರ್ 1, 2026, ಭಾನುವಾರ

ನಿತ್ಯ ಪಂಚಾಂಗ 1.11.2026 ಭಾನುವಾರ

ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ–ಆಶ್ವಯುಜ ಮಾಸ

ಆಶ್ವಯುಜ ಬಹುಳ, ಸಪ್ತಮಿ, ಆರಿದ್ರಾ ನಕ್ಷತ್ರ,

ಕನ್ನಡ ರಾಜ್ಯೋತ್ಸವ, ಮಾಣಿಕಪ್ರಭು ಪುಣ್ಯದಿನ, ಕೂಡ್ಲ ವಿದ್ಯಾಭಿನವ ನೃಸಿಂಹಭಾರತೀ ಪೀಠಾರೋಹಣ ದಿನ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	ಸ. 5.04– 6.33	12.00– 1.30	3.00– 4.00
ಸೋಮ	ಬೆ. 7.20– 9.04	10.30–12.00	1.30– 3.00
ಮಂಗಳ	ಮ. 3.25– 4.59	9.00–10.30	12.00– 1.30
ಬುಧ	ಮ.12.16– 1.50	7.30– 9.00	10.30– 12.00
ಗುರು	ಮ. 1.50– 3.29	6.00– 7.30	9.00– 10.30
ಶುಕ್ರ	ಬೆ.10.42–12.16	3.00– 4.30	7.30– 9.00
ಶನಿ	ಬೆ. 9.07–10.41	1.30– 3.00	6.00– 7.30

ಮೇಕೆದಾಟು ಜಲಾಶಯಕ್ಕೆ ಅರಣ್ಯಭೂಮಿ ಸೇರಿ 2500 ಎಕರೆ ಪರ್ಯಾಯ ಜಾಗ

66 ಟಿಎಂಸಿ ನೀರು ಸಂಗ್ರಹಿಸಲು ಸಾಧ್ಯ, ಕಾವೇರಿ ಜಲಾನಯನದ ರೈತರಿಗೆ ಅನುಕೂಲ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

ಮಂಡ್ಯ, ಅ.31: ಬೆಂಗಳೂರು ದಕ್ಷಿಣ ಜಿಲ್ಲೆಯ ಕನಕಪುರ ತಾಲೂಕಿನಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿರುವ ಮೇಕೆದಾಟು ಸಮತೋಲನ ಜಲಾಶಯ ಯೋಜನೆಗಾಗಿ, ಅರಣ್ಯ ಭೂಮಿ ಸೇರಿದಂತೆ ಒಟ್ಟು 2,500 ಎಕರೆ ಜಮೀನನ್ನು ಪರ್ಯಾಯ ಭೂಮಿಯಾಗಿ ಗುರುತಿಸಲಾಗಿದೆ ಎಂದು ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶನಿವಾರ ತಿಳಿಸಿದ್ದಾರೆ.

ಮಂಡ್ಯದಲ್ಲಿ ಸುದ್ದಿಗಾರರ ಜತೆ ಮಾತನಾಡಿ,ಈ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ಮಾಡುವ ಸಮಿತಿಗೆ ಅಧ್ಯಕ್ಷರನ್ನಾಗಿ ಮಂಡ್ಯ ಜಿಲ್ಲಾಧಿಕಾರಿಯನ್ನು ನೇಮಿಸಲಾಗಿದೆ ಮತ್ತು ಅರಣ್ಯ ಇಲಾಖೆಗೆ ಪರ್ಯಾಯ ಭೂಮಿಯನ್ನು ಒದಗಿಸುವ ಕುರಿತು ಅಧಿಕಾರಿಗಳು ಈಗಾಗಲೇ ಸಭೆಗಳನ್ನು ನಡೆಸಿದ್ದಾರೆ ಎಂದು ತಿಳಿಸಿದರು.

ಯೋಜನೆಗೆ ಅಗತ್ಯವಿರುವ ಭೂಮಿಯ ಬದಲಾಗಿ, ಅರಣ್ಯ ಭೂಮಿ ಸೇರಿದಂತೆ ಪರ್ಯಾಯ ಜಮೀನನ್ನು ಒದಗಿಸಲು ಒಮ್ಮತದಿಂದ ನಿರ್ಧರಿಸಿದ್ದೇವೆ. ಇಲ್ಲಿಯವರೆಗೆ 2,500 ಎಕರೆ ಭೂಮಿಯನ್ನು ಗುರುತಿಸಿದ್ದೇವೆ ಮತ್ತು ಉಳಿದ ಭೂಮಿಯನ್ನು ಗುರುತಿಸುವ ಪ್ರಕ್ರಿಯೆ ನಡೆಯುತ್ತಿದೆ. ಯೋಜನೆಗೆ ತಮಿಳುನಾಡು ವಿರೋಧ ವ್ಯಕ್ತಪಡಿಸಿದೆ ಎಂದರು.

ರಾಜ್ಯ ಸರ್ಕಾರ ಅರಣ್ಯ ಅನುಮತಿ ಪೋರ್ಟಲ್‌ನಲ್ಲಿ ಪರ್ಯಾಯ ಭೂಮಿಗೆ ಸಂಬಂಧಿಸಿದ ವಿವರಗಳನ್ನು ಅಪ್‌ಲೋಡ್ ಮಾಡಲಿದ್ದು, ಆ ನಂತರ ಅಗತ್ಯ ಅನುಮತಿಗಳು ದೊರೆಯುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.ನಾವು ಒದಗಿಸುತ್ತಿರುವ ಭೂಮಿಯ ಸಂಪೂರ್ಣ ವಿವರಗಳನ್ನು ಅಪ್‌ಲೋಡ್ ಮಾಡುತ್ತೇವೆ. ಒಮ್ಮೆ ನಾವು ಹಾಗೆ ಮಾಡಿದರೆ, ಅವರು ಅಗತ್ಯ ಅನುಮತಿಯನ್ನು ನೀಡಬೇಕಾಗುತ್ತದೆಎಂದು ತಿಳಿಸಿದರು.

ಈ ಯೋಜನೆಗಾಗಿ ರೈತರ ಸುಮಾರು 500 ಎಕರೆ ಭೂಮಿಯನ್ನು ಮಾತ್ರ ಸ್ವಾಧೀನಪಡಿಸಿಕೊಳ್ಳಲಾಗುವುದು ಎಂದು ಉಲ್ಲೇಖಿಸಿದ ಶಿವಕುಮಾರ್, ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದು ಹೇಳಿದರು.

ಎಆರ್‌ಎಐಗೆ ಸೂಕ್ತ ಭೂಮಿ ಒದಗಿಸಲು ಸರ್ಕಾರ ಸಿದ್ಧ

ಮಂಡ್ಯದಲ್ಲಿ ಪ್ರಸ್ತಾಪಿಸಲಾದ 'ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ (ಎಆರ್‌ಎಐ) ಪರೀಕ್ಷಾ ಘಟಕವನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಭೂಮಿಯನ್ನು ಒದಗಿಸುತ್ತಿಲ್ಲ ಎಂಬ ಜೆಡಿಎಸ್ ನಾಯಕ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಕ್ಕೆ ಪ್ರತಿಕ್ರಿಯಿಸಿದ ಶಿವಕುಮಾರ್, ಸರ್ಕಾರ ಅಗತ್ಯವಿರುವ ಭೂಮಿಯನ್ನು ಒದಗಿಸಲು ಸಿದ್ಧವಾಗಿದೆ ಆರಂಭದಲ್ಲಿ 100 ಎಕರೆ ಭೂಮಿಯನ್ನು ನೀಡಲು ಮುಂದಾಗಿದ್ದೆವು. ಆದರೆ (ಭಾರಿ ಕೈಗಾರಿಕಾ ಇಲಾಖೆಗೆ) ಇನ್ನೂ ಹೆಚ್ಚಿನ ಭೂಮಿ ಬೇಕೆಂದು ಹೇಳಿದ್ದಾರೆ. ನಾವು ಖಂಡಿತವಾಗಿಯೂ ಅದನ್ನು ಒದಗಿಸುತ್ತೇವೆ. ಮೊದಲು ಯೋಜನೆಯ ಕೆಲಸವನ್ನು ಮುಂದುವರಿಸಲಿ. ಅವರಿಗೆ ಯಾವ ಭೂಮಿ ಬೇಕೋ ಅದನ್ನು ಅವರು ಗುರುತಿಸಲಿ. ಯಾವ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಬೇಕು ಎಂಬುದನ್ನು ಅವರು ನಮಗೆ ತಿಳಿಸಲಿ. ಅಗತ್ಯವಿದ್ದರೆ, ನಾವು ಅವರಿಗಾಗಿ ಆ ನಿರ್ದಿಷ್ಟ ಭೂಮಿಯನ್ನೇ ಸ್ವಾಧೀನಪಡಿಸಿಕೊಳ್ಳುತ್ತೇವೆ. ಅವರು ಕೇಳುವ ಯಾವುದೇ ಭೂಮಿಯನ್ನು ನಾವು ಒದಗಿಸುತ್ತೇವೆ" ಎಂದು ಅವರು ಸ್ಪಷ್ಟವಾಗಿ ಹೇಳಿದರು.

ಕುಡಿಯುವ ನೀರು, 400 ಮೆ.ವ್ಯಾ. ವಿದ್ಯುತ್ ಉತ್ಪಾದನೆ

ಮೇಕೆದಾಟು ಯೋಜನೆಗೆ ಸುಪ್ರೀಂ ಕೋರ್ಟ್‌ನಿಂದ ಅನುಮತಿಯನ್ನೂ ಪಡೆಯಲಾಗಿದೆ. ಈ ಯೋಜನೆ ಜಾರಿಯಾದರೆ, ಕರ್ನಾಟಕ 66 ಟಿಎಂಸಿ ನೀರನ್ನು ಸಂಗ್ರಹಿಸಿಟ್ಟುಕೊಳ್ಳಲು ಮತ್ತು ನೀರಿನ ಕೊರತೆಯಿರುವ ಕಠಿಣ ಸಮಯಗಳಲ್ಲಿ ನೀರನ್ನು ನಿಯಂತ್ರಿತವಾಗಿ ಬಿಡುಗಡೆ ಮಾಡಲು ಸಾಧ್ಯವಾಗುತ್ತದೆ. ಇದರಿಂದ ಮಂಡ್ಯ ಮತ್ತು ಕಾವೇರಿ ಜಲಾನಯನ ಪ್ರದೇಶದ ಇತರ ಭಾಗಗಳಲ್ಲಿರುವ ರೈತರಿಗೆ ಅನುಕೂಲವಾಗಲಿದೆ ಎಂದು ಹೇಳಿದರು. ಅಧಿಕಾರಿಗಳ ಪ್ರಕಾರ, ಈ ಯೋಜನೆ ಪೂರ್ಣಗೊಂಡರೆ ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಿಗೆ 4.75 ಟಿಎಂಸಿ ಅಡಿ ಕುಡಿಯುವ ನೀರನ್ನು ಒದಗಿಸಲು ಸಾಧ್ಯವಾಗುತ್ತದೆ; ಜೊತೆಗೆ, ಇದರಿಂದ 400 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯೂ ಆಗಲಿದೆ. ಯೋಜನೆಯ ಮಹತ್ವವನ್ನು ವಿವರಿಸಿದ ಶಿವಕುಮಾರ್, ಕರ್ನಾಟಕ ನದಿಯ ಕೆಳಭಾಗಕ್ಕೆ 177 ಟಿಎಂಸಿ ನೀರನ್ನು ಹರಿಸಬೇಕಾದ ಅನಿವಾರ್ಯತೆಯಿದೆ. ಹೀಗಾಗಿ, ಪ್ರಸ್ತಾಪಿತ ಜಲಾಶಯ ನೀರು ಬಿಡುಗಡೆಯನ್ನು ನಿಯಂತ್ರಿಸಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಫಾರ್ಮ್–7 ದುರ್ಬಳಕೆ: ವರದಿ ಸಲ್ಲಿಸುವಂತೆ ಆಯೋಗಕ್ಕೆ ಸುಪ್ರೀಂ ಸೂಚನೆ

ನವದೆಹಲಿ, ಅ.31: ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತದಾರರ ಹೆಸರುಗಳನ್ನು ಅಳಿಸಲು ಫಾರ್ಮ್–7 ನಮೂನೆಗಳನ್ನು ಅಪಾರ ಪ್ರಮಾಣದಲ್ಲಿ ಮತ್ತು ಅಕ್ರಮವಾಗಿ ಸಲ್ಲಿಸಲಾಗಿದೆ ಎಂದು ಆರೋಪಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸಿದೆ.

ಫಾರ್ಮ್–7 ದುರ್ಬಳಕೆ ಮತ್ತು ಸುಧಾರಣಾ ಕ್ರಮಗಳ ಬಗ್ಗೆ ವರದಿ ಸಲ್ಲಿಸುವಂತೆ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಿದೆ.

ಉತ್ತರ ಪ್ರದೇಶದಲ್ಲಿ ಸುಮಾರು 2.5 ಕೋಟಿ ಮತದಾರರನ್ನು ಮತಪಟ್ಟಿಯಿಂದ ಅಳಿಸಿ ಹಾಕಲಾಗಿದೆ. ಅರ್ಹರ ಹೆಸರುಗಳನ್ನು ಅಳಿಸಲು ಫಾರ್ಮ್7ನ್ನು ಅಗಾಧವಾಗಿ ದುರ್ಬಳಕೆ ಮಾಡಿಕೊಳ್ಳಾಗಿದೆ ಎಂದು ಕಾಂಗ್ರೆಸ್ ಸಂಸದ ತನುಜ್ ಪುನಿಯಾ ಹಾಗೂ ಇತರರು ಅರ್ಜಿ ಸಲ್ಲಿಸಿದ್ದರು. ಅರ್ಜಿಗಳನ್ನು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿ ಜೋಯ್ಮಾಲ್ಯ ಬಾಗ್ಚಿ ಮತ್ತು ನ್ಯಾಯಮೂರ್ತಿ ವಿ. ಮೋಹನ ಅವರನ್ನೊಳಗೊಂಡ ತ್ರಿಸದಸ್ಯ ಪೀಠ ವಿಚಾರಣೆ ನಡೆಸಿದೆ. ಅರ್ಜಿದಾರರು ಆಕ್ಷೇಪಿಸಿರುವ ಮತ್ತು ಇದುವರೆಗೆ ಬಗೆಹರಿಯದೆ ಉಳಿದಿರುವ ಸಮಸ್ಯೆ ಮತ್ತು ಗೊಂದಲಗಳ ಕುರಿತು ಸಂಪೂರ್ಣ ವಿವರಗಳನ್ನು ಒಳಗೊಂಡ ವರದಿಯನ್ನು ಸಲ್ಲಿಸಬೇಕು ಎಂದು ತಾಕೀತು ಮಾಡಿದೆ.

ಚುನಾವಣಾ ಆಯೋಗದ ಪರವಾಗಿ ಹಾಜರಿದ್ದ ಹಿರಿಯ ವಕೀಲ ಡಿ.ಎಸ್ ನಾಯ್ಡು, ಸಾಮೂಹಿಕವಾಗಿ ಫಾರ್ಮ್–7 ಅರ್ಜಿಗಳು ಸಲ್ಲಿಕೆಯಾಗಿರುವುದನ್ನು ಒಪ್ಪಿಕೊಂಡಿದ್ದಾರೆ. ಆದರೆ, ಆ ಅರ್ಜಿಗಳ ಮೇಲೆ ಅಕ್ರಮ ಕ್ರಮ ಜರುಗಿಸಿಲ್ಲ. ನಮ್ಮ ಅಧಿಕಾರಿಗಳು ಈ ರೀತಿ ಬಂದ ಸಾಲು ಸಾಲು ಅರ್ಜಿಗಳನ್ನು ಪರಿಶೀಲಿಸಿದಾಗ ಅವು ಸುಳ್ಳು ಮತ್ತು ದುರುದ್ದೇಶಪೂರಿತ ಎಂದು ಕಂಡುಬಂದಿದೆ. ಹಾಗಾಗಿ ನಾವು ಆ ಅರ್ಜಿಗಳ ಆಧಾರದ ಮೇಲೆ ಯಾವುದೇ ಹೆಸರುಗಳನ್ನು ಡಿಲೀಟ್ ಮಾಡಿಲ್ಲ ಅಥವಾ ಕ್ರಮ ತೆಗೆದುಕೊಂಡಿಲ್ಲ ಎಂದು ಕೋರ್ಟ್‌ಗೆ ತಿಳಿಸಿದ್ದಾರೆ.

ಕರ್ನಾಟಕದ 7 ಮಂದಿಗೆ ಗೃಹಮಂತ್ರಿ ದಕ್ಷತಾ ಪದಕ

ಬೆಂಗಳೂರು, ಅ.31: ತನಿಖಾ ಕ್ಷೇತ್ರ ಮತ್ತು ವಿಧಿವಿಜ್ಞಾನ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಕರ್ನಾಟಕ ರಾಜ್ಯದ ಒಟ್ಟು ಏಳು ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ 2026ನೇ ಸಾಲಿನ ಪ್ರತಿಷ್ಠಿತ "ಕೇಂದ್ರೀಯ ಗೃಹಮಂತ್ರಿ ದಕ್ಷತಾ ಪದಕ" ಲಭಿಸಿದೆ.

ತನಿಖಾ ಕ್ಷೇತ್ರದಲ್ಲಿನ ಅತ್ಯುತ್ತಮ ಕಾರ್ಯನಿರ್ವಹಣೆಗಾಗಿ ಒಟ್ಟು ಆರು ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಬೆಂಗಳೂರು ನಗರದ ಹಲಸೂರು ಗೇಟ್ ಸಂಚಾರ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಶೋಭಾ ಎನ್, ಬೆಳಗಾವಿ ನಗರದ ಮಾಳಮಾರುತಿ ಠಾಣೆಯ ಇನ್ಸ್‌ಪೆಕ್ಟರ್ ಬಾವುದ್ದೀನ್ ರುಕ್ಷುದ್ದೀನ್ ಗಡೇಕರ್, ಬೆಂಗಳೂರಿನ ಪ್ರಧಾನ ಕಚೇರಿಯ ಪೊಲೀಸ್ ಇನ್ಸ್‌ಪೆಕ್ಟರ್ ಎಂ. ಶ್ರೀನಿವಾಸ್ ರಾವ್, ರಾಯಚೂರಿನ ದೇವದುರ್ಗ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಮಂಜುನಾಥ್, ಬೆಂಗಳೂರು ನಗರ ಪೂರ್ವ ವಿಭಾಗದ ಮಹಿಳಾ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಎಎಸ್‌ಐ) ರತ್ನಮ್ಮ ಕೆ ಹಾಗೂ ಬೆಂಗಳೂರಿನ ಸಿಐಡಿ ಘಟಕದ ಸಿಎಚ್‌ಸಿ ಬಾಲಕೃಷ್ಣ ವೈ ಅವರು ತನಿಖಾ ವಿಭಾಗದ ಪದಕಕ್ಕೆ ಭಾಜನರಾಗಿದ್ದಾರೆ.

ವಿಧಿವಿಜ್ಞಾನ ವಿಭಾಗದಲ್ಲಿ ನೀಡಲಾಗುವ ದಕ್ಷತಾ ಪದಕಕ್ಕೆ ಮೈಸೂರಿನ ಪ್ರಾದೇಶಿಕ ವಿಧಿವಿಜ್ಞಾನ ಪ್ರಯೋಗಾಲಯದ ಉಪನಿರ್ದೇಶಕ ಡಾ. ಚಂದ್ರಶೇಖರ್ ಗೌರವಕ್ಕೆ ಪಾತ್ರರಾಗಿದ್ದಾರೆ.

ತಮ್ಮ ಅತ್ಯುತ್ತಮ ಸೇವೆ, ದಕ್ಷತೆ ಮತ್ತು ಕರ್ತವ್ಯ ನಿಷ್ಠೆಯನ್ನು ಗುರುತಿಸಿ ಕೇಂದ್ರ ಗೃಹ ಸಚಿವಾಲಯದಿಂದ ಈ ಪದಕಗಳನ್ನು ಪ್ರಕಟಿಸಲಾಗಿದೆ ಎಂದು ಪೊಲೀಸ್ ಪ್ರಧಾನ ಕಚೇರಿಯ ಸೂಪರಿಂಟೆಂಡೆಂಟ್ ಆಫ್ ಪೊಲೀಸ್ ಹಾಗೂ ಸಾರ್ವಜನಿಕ ಸಂಪರ್ಕ ಅಧಿಕಾರಿ ಮೂರ್ತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಚ್‌ಎಂಟಿ ವಾಚ್ ವಿಭಾಗ ಪುನಶ್ಚೇತನ: ಎಚ್‌ಡಿಕೆ

ರಾಜ್ಯೋತ್ಸವ ಹಿನ್ನೆಲೆ: ಇಂದು ಎಚ್‌ಎಂಟಿ ಕನ್ನಡ ಕೈಗಡಿಯಾರ ಬಿಡುಗಡೆ

ನವದೆಹಲಿ, ಅ.31: ಎಚ್‌ಎಂಟಿ ವಾಚ್ ವಿಭಾಗವನ್ನು ಹಂತ ಹಂತವಾಗಿ ಪುನಶ್ಚೇತನಗೊಳಿಸುವ ಕಾರ್ಯ ನಡೆಯುತ್ತಿದ್ದು, ಕನ್ನಡ ರಾಜ್ಯೋತ್ಸವದ ಅಂಗವಾಗಿ ನಾಲ್ಕು ವಿಶೇಷ ಮಾದರಿಯ ವಾಚ್‌ಗಳನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 71ನೇ ಕನ್ನಡ ರಾಜ್ಯೋತ್ಸವ ಆಚರಿಸಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಎಚ್‌ಎಂಟಿ ವತಿಯಿಂದ ವಿಶೇಷ ವಾಚ್‌ಗಳನ್ನು ಬಿಡುಗಡೆ ಮಾಡಲಾಗುತ್ತಿದೆ. 'ಎಚ್‌ಎಂಟಿ ಕನ್ನಡಿಗ' ಎಂಬ ಹೆಸರಿನಲ್ಲಿ ನಾಲ್ಕು ಮಾದರಿಯ ವಾಚ್‌ಗಳು ಮಾರುಕಟ್ಟೆಗೆ ಬರಲಿವೆ. ಎಚ್‌ಎಂಟಿ ಮೈದಾನದಲ್ಲಿ ಭಾನುವಾರ ಸಂಜೆ ನಡೆಯಲಿರುವ ಕಾರ್ಯಕ್ರಮದಲ್ಲಿ ಕೈಗಡಿಯಾರಗಳನ್ನು ಬಿಡುಗಡೆ ಮಾಡಲಾಗುವುದು. ಕಾರ್ಯಕ್ರಮದ ಅಂಗವಾಗಿ ಅರ್ಜುನ್ ಜನ್ಯ ನೇತೃತ್ವದಲ್ಲಿ ಸಂಗೀತ ಸಂಜೆ ಆಯೋಜಿಸಲಾಗಿದೆ ಎಂದರು. ಎಚ್‌ಎಂಟಿ ವಾಚ್‌ಗಳ ಬಗ್ಗೆ ಜನರಲ್ಲಿ ಮತ್ತೆ ಆಸಕ್ತಿ ಮೂಡುತ್ತಿದೆ. ವಾಚ್ ಖರೀದಿಸಲು ಜನರು ಕಿಲೋಮೀಟರ್‌ಗಟ್ಟಲೆ ಸರತಿ ಸಾಲಿನಲ್ಲಿ ನಿಲ್ಲುತ್ತಿದ್ದಾರೆ. ಹಳೆಯ ಭಾವನಾತ್ಮಕ ಸಂಬಂಧವನ್ನು ಮರುಸ್ಥಾಪಿಸುವ ಮೂಲಕ ಸಂಸ್ಥೆಗೆ ಹೊಸ ಚೈತನ್ಯ ತುಂಬುವ ಪ್ರಯತ್ನ ಮಾಡಲಾಗುತ್ತಿದೆ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಹೇಳಿದರು.

ಕರ್ನಾಟಕದ ನೆರೆ ರಾಜ್ಯಗಳಿಗೆ ಹೂಡಿಕೆ ಹರಿವು: ಕರ್ನಾಟಕದಲ್ಲಿ ದೊಡ್ಡ ಮಟ್ಟದ ಹೂಡಿಕೆಗಳು ಬರುತ್ತಿಲ್ಲ. ಇತರ ರಾಜ್ಯಗಳಾದ ಒಡಿಶಾ, ಆಂಧ್ರಪ್ರದೇಶ, ಗುಜರಾತ್ ಮತ್ತು ತಮಿಳುನಾಡುಗಳಿಗೆ ಹೂಡಿಕೆಗಳು ಹರಿದುಹೋಗುತ್ತಿವೆ. ಮ್ಯಾಗ್ನೆಟ್ ತಯಾರಿಕಾ ಕಂಪನಿಗಳು ಕರ್ನಾಟಕಕ್ಕೆ ಬಾರದೆ ಬೇರೆ ರಾಜ್ಯಗಳನ್ನು ಆಯ್ಕೆ ಮಾಡಿಕೊಳ್ಳುತ್ತಿರುವುದಕ್ಕೆ ಕಾರಣವೇನು ರಾಜ್ಯದ ಎಂಜಿನಿಯರಿಂಗ್ ಪದವೀಧರರಿಗೆ ಉದ್ಯೋಗ ಕಲ್ಪಿಸಲು ಐಟಿ–ಬಿಟಿ ಸಚಿವರು ಕೈಗೊಂಡಿರುವ ಕ್ರಮಗಳೇನು ಎಂದು ಪ್ರಶ್ನಿಸಿದರು. ಮುಖ್ಯಮಂತ್ರಿ 'ವಿಕಸಿತ ಕರ್ನಾಟಕ 2047' ಯೋಜನೆ ಆರಂಭಿಸಿರುವುದನ್ನು ಶ್ಲಾಘಿಸಿದ ಅವರು, ರಾಜ್ಯದಲ್ಲಿ ಹೂಡಿಕೆ ಆಕರ್ಷಿಸಲು ಘೋಷಣೆಗಳಷ್ಟೇ ಸಾಲದು, ಅದಕ್ಕೆ ಅಗತ್ಯವಾದ ಹಣಕಾಸು ಮತ್ತು ಕಾರ್ಯಯೋಜನೆ ಇರಬೇಕು ಎಂದು ಹೇಳಿದರು.

ನಿರುದ್ಯೋಗಿ ಸಚಿವ ಎಂಬ ಟೀಕೆಗೆ ಕುಮಾರಸ್ವಾಮಿ ತಿರುಗೇಟು

ಗೃಹ ಸಚಿವ ಪ್ರಿಯಾಂಕ ಖರ್ಗೆ ತಮ್ಮನ್ನು 'ನಿರುದ್ಯೋಗಿ ಸಚಿವ' ಎಂದು ಟೀಕಿಸಿರುವುದಕ್ಕೆ ತಿರುಗೇಟು ನೀಡಿದ ಕುಮಾರಸ್ವಾಮಿ, ಅವರಿಗೆ ಕೇಂದ್ರ ಬೃಹತ್ ಕೈಗಾರಿಕೆ ಇಲಾಖೆಯ ಕಾರ್ಯವೈಖರಿ ಬಗ್ಗೆ ಸರಿಯಾದ ಮಾಹಿತಿ ಇಲ್ಲ ಎಂದು ಟೀಕಿಸಿದರು. ವಿದ್ಯುತ್ ಚಾಲಿತ ವಾಹನಗಳ ಬಳಕೆಗೆ ಉತ್ತೇಜನ ನೀಡಲು 2019ರಲ್ಲಿ ಫೇಮ್–1 ಮತ್ತು ಫೇಮ್–2 ಯೋಜನೆಗಳನ್ನು ಜಾರಿಗೆ ತರಲಾಗಿತ್ತು. ಇದೀಗ ಪಿಎಂ ಇ–ಡ್ರೈವ್ ಯೋಜನೆ ಮೂಲಕ ಇವಿ ವಾಹನಗಳ ಬಳಕೆಗೆ ಪ್ರೋತ್ಸಾಹ ನೀಡಲಾಗುತ್ತಿದೆ. ವಿದ್ಯುತ್ ವಾಹನ ತಯಾರಿಕಾ ಕಂಪನಿಗಳಿಗೆ ಸಬ್ಸಿಡಿ ನೀಡುವುದು ಹಾಗೂ ಮಾಲಿನ್ಯ ನಿಯಂತ್ರಣಕ್ಕೆ ನೆರವಾಗುವುದು ನಮ್ಮ ಇಲಾಖೆಯ ಪ್ರಮುಖ ಉದ್ದೇಶವಾಗಿದೆ. ರಾಜ್ಯಗಳಲ್ಲಿ ಕಾರ್ಖಾನೆಗಳನ್ನು ಸ್ಥಾಪಿಸುವುದು ಈ ಇಲಾಖೆಯ ನೇರ ಕೆಲಸವಲ್ಲ ಎಂದು ಸ್ಪಷ್ಟಪಡಿಸಿದರು. ಚೀನಾ ಮ್ಯಾಗ್ನೆಟ್ ಪೂರೈಕೆಗೆ ನಿರ್ಬಂಧ ವಿಧಿಸಿರುವ ಹಿನ್ನೆಲೆಯಲ್ಲಿ ದೇಶದಲ್ಲೇ ಮ್ಯಾಗ್ನೆಟ್ ಉತ್ಪಾದಿಸುವ ನಿಟ್ಟಿನಲ್ಲಿ ಇಲಾಖೆಯಲ್ಲಿ ಹಲವು ಸಭೆಗಳನ್ನು ನಡೆಸಿ ಪ್ರಕ್ರಿಯೆ ಆರಂಭಿಸಲಾಗಿದೆ. ಆದರೆ ಕರ್ನಾಟಕ ಸರ್ಕಾರ ಈ ವಿಚಾರದಲ್ಲಿ ಆಸಕ್ತಿ ತೋರಿಸಿಲ್ಲ ಎಂದು ಆರೋಪಿಸಿದರು. ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ರಾಜ್ಯದಲ್ಲಿ ಕೈಗಾರಿಕೆ ಮತ್ತು ಉದ್ಯೋಗ ಸೃಷ್ಟಿಗೆ ಸಂಬಂಧಿಸಿದಂತೆ ಏನು ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದರು. ಟನಲ್ ಬೋರಿಂಗ್ ಮಿಷನ್ ತಯಾರಿಸುವ ಹೊಸ ಯೋಜನೆಯನ್ನೂ ರೂಪಿಸಲಾಗುತ್ತಿದೆ. ಕೇಂದ್ರ ಬೃಹತ್ ಕೈಗಾರಿಕೆ ಇಲಾಖೆಯ ಕಾರ್ಯಗಳ ಬಗ್ಗೆ ತಿಳಿದುಕೊಳ್ಳದೆ ತಮ್ಮನ್ನು ನಿರುದ್ಯೋಗಿ ಸಚಿವ ಎಂದು ಟೀಕಿಸುವುದು ಸರಿಯಲ್ಲ ಎಂದು ಹೇಳಿದರು.

ಬೊಕ್ಕಸ ಭರ್ತಿಗೆ ಕೆಎಂಎಫ್ ಗುತ್ತಿಗೆ ಪಡೆದ ಕಾಂಗ್ರೆಸ್ ಸರ್ಕಾರ

ನವದೆಹಲಿ, ಅ.31: ದುರಾಡಳಿತದಿಂದ ಬೊಕ್ಕಸ ಖಾಲಿ ಮಾಡಿಕೊಂಡಿರುವ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಖಜಾನೆ ತುಂಬಿಕೊಳ್ಳಲು ಇಡೀ ಕೆಎಂಎಫ್ ಸಂಸ್ಥೆಯನ್ನೇ ಗುತ್ತಿಗೆ ಪಡೆದುಕೊಂಡಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಕಿಡಿಕಾರಿದ್ದಾರೆ.

ನಿನ್ನೆಯಷ್ಟೇ ರೈತರ ಹೆಸರು ಹೇಳಿ ನಂದಿನಿ ಹಾಲಿನ ದರ ಏರಿಕೆ ಮಾಡಿದ್ದ ಸರ್ಕಾರ ಇದೀಗ ನಂದಿನಿ ಮೊಸರಿನ ಬೆಲೆಯನ್ನೂ ಗಗನಕ್ಕೇರಿಸಿದೆ. ಹಾಲು, ಮೊಸರು, ತುಪ್ಪ ಹೀಗೆ ಇಡೀ ಕೆಎಂಎಫ್ ಉತ್ಪನ್ನಗಳ ಬೆಲೆಯನ್ನು ದುಪ್ಪಟ್ಟು ಅಧಿಕಗೊಳಿಸಿ ಶ್ರೀಸಾಮಾನ್ಯರ ಜೇಬನ್ನು ಖಾಲಿ ಮಾಡುತ್ತಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಬೆಲೆ ಏರಿಕೆಯಲ್ಲಿ ಹೊಸ ಇತಿಹಾಸ ಸೃಷ್ಟಿಸಿದೆ. ಈ ಸರ್ಕಾರಕ್ಕೆ ನಿಜಕ್ಕೂ ಶ್ರೀಸಾಮಾನ್ಯರ ಬಗ್ಗೆ ಕಾಳಜಿಯೇ ಇಲ್ಲವಾಗಿದೆ ಎಂದಿದ್ದಾರೆ.

■ ಬೆಲೆ ಏರಿಕೆಯಲ್ಲಿ ಹೊಸ ಇತಿಹಾಸ: ಕೇಂದ್ರ ಆಹಾರ ಸಚಿವ ಪ್ರಲ್ಹಾದ ಜೋಶಿ ತೀವ್ರ ಆಕ್ರೋಶ

ಪ್ರಸ್ತುತ ಅರ್ಧ ಲೀಟರ್ ಮೊಸರಿನ ಬೆಲೆಯನ್ನು 28ರಿಂದ 34ಕ್ಕೆ ಏರಿಸಿದ್ದು, ಶೇ.21.43ರಷ್ಟು ಅಂದರೆ 6 ಹೆಚ್ಚಿಸಿದೆ. ಒಂದು ಲೀಟರ್ ಮೊಸರು ಅನ್ನು 54ರಿಂದ 68ಕ್ಕೆ ಅಂದರೆ ಶೇ.25.93ರಷ್ಟು ಲೀಟರ್ ಗೆ ಬರೋಬ್ಬರಿ 14 ಭಾರೀ ಏರಿಕೆ ಮಾಡಿದ್ದು, ಜನರಿಗೆ ಮೊಸರು ಕೊಟ್ಟು ತಾನು ಬೆಣ್ಣೆ ತಿನ್ನುತ್ತಿದೆ ಕಾಂಗ್ರೆಸ್ ಸರ್ಕಾರ ಎಂದು ಜೋಶಿ ಹರಿಹಾಯ್ದಿದ್ದಾರೆ. ನಿನ್ನೆಯಷ್ಟೇ ಹಾಲಿನ ದರವನ್ನು ಲೀಟರ್‌ಗೆ 8 ಹೆಚ್ಚಿಸಿದ್ದ ಸರ್ಕಾರ, ಈಗ ಒಂದೇ ಬಾರಿಗೆ ಶೇ.21ರಿಂದ 26% ರಷ್ಟು ಮೊಸರಿನ ಬೆಲೆಯನ್ನೂ ಏರಿಸಿ ಬಡ ಹಾಗೂ ಮಧ್ಯಮ ವರ್ಗದವರ ಹೊಟ್ಟೆ ಮೇಲೆ ಹೊಡೆಯುವ ಕೆಲಸ ಮಾಡಿದೆ ಎಂದು ಖಂಡಿಸಿದ್ದಾರೆ. ರಾಜ್ಯದಲ್ಲಿ ಅಭಿವೃದ್ಧಿಯನ್ನು ಮರೀಚಿಕೆಯಾಗಿಸಿದ ಕಾಂಗ್ರೆಸ್ ಸರ್ಕಾರ, ತನ್ನ ತಪ್ಪು ನಡೆ–ನಿರ್ಣಯ, ಯೋಜನೆಗಳಿಂದಾಗಿ ಈಗ KMF ಉತ್ಪನ್ನಗಳ ಬೆಲೆ ಏರಿಕೆ ಮೂಲಕ ರಾಜ್ಯದ ಜನರಿಂದ ಸುಂಕ ವಸೂಲಿ ಮಾಡುತ್ತಿದ್ದು, ಇದು ಜನವಿರೋಧಿ ಹಾಗೂ ದುಬಾರಿ ನೀತಿಗೆ ಹಿಡಿದ ಕೈಗನ್ನಡಿ ಎಂದು ಪ್ರಲ್ಹಾದ ಜೋಶಿ ಹೇಳಿದ್ದಾರೆ.

ಪಂಜಾಬ್ ವಿಧಾನಸಭೆ ಚುನಾವಣೆ: ಆಪ್‌ನ 40 ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆ

ನವದೆಹಲಿ, ಅ.31: 2027ರಲ್ಲಿ ನಡೆಯಲಿರುವ ಪಂಜಾಬ್ ವಿಧಾನಸಭೆ ಚುನಾವಣೆಗೆ ಆಮ್ ಆದ್ಮಿ ಪಕ್ಷ ಸಿದ್ಧತೆ ಆರಂಭಿಸಿದ್ದು, ಚುನಾವಣೆಗೆ ಮೊದಲ ಹಂತದ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ.

ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಅವರ ನಿವಾಸದಲ್ಲಿ ನಡೆದ ಹಿರಿಯ ನಾಯಕರ ಸಭೆಯಲ್ಲಿ ಅಭ್ಯರ್ಥಿಗಳ ಆಯ್ಕೆ ಕುರಿತು ಚರ್ಚಿಸಲಾಗಿತ್ತು. ಮುಖ್ಯಮಂತ್ರಿ ಭಗವಂತ್ ಮಾನ್, ಅರವಿಂದ್ ಕೇಜ್ರಿವಾಲ್, ಪಂಜಾಬ್ ಉಸ್ತುವಾರಿ ಮನೀಶ್ ಸಿಸೋಡಿಯಾ ಸೇರಿ ಹಲವು ನಾಯಕರು ಭಾಗವಹಿಸಿದ್ದರು. ಬಳಿಕ ಪಕ್ಷದ ರಾಜಕೀಯ ವ್ಯವಹಾರಗಳ ಸಮಿತಿಯ ಅನುಮೋದನೆಯೊಂದಿಗೆ 40 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಪ್ರಕಟಿಸಲಾಗಿದೆ.

117 ಸದಸ್ಯ ಬಲದ ಪಂಜಾಬ್ ವಿಧಾನಸಭೆಯ ಅವಧಿ 2027ರ ಮಾರ್ಚ್ 16ರಂದು ಮುಕ್ತಾಯಗೊಳ್ಳಲಿದೆ. ಮುಂದಿನ ವರ್ಷದ ಫೆಬ್ರವರಿ ಅಥವಾ ಮಾರ್ಚ್‌ನಲ್ಲಿ ಚುನಾವಣೆ ನಡೆಯುವ ನಿರೀಕ್ಷೆಯಿದೆ. ಚುನಾವಣಾ ಆಯೋಗ ಇನ್ನೂ ಅಧಿಕೃತ ವೇಳಾಪಟ್ಟಿಯನ್ನು ಪ್ರಕಟಿಸಿಲ್ಲ. ಅಧಿಕಾರ ಉಳಿಸಿಕೊಳ್ಳುವ ಉದ್ದೇಶದಿಂದ ಆಮ್ ಆದ್ಮಿ ಪಕ್ಷ ತಯಾರಿ ಆರಂಭಿಸಿರುವುದು ರಾಜಕೀಯ ಮಹತ್ವ ಪಡೆದುಕೊಂಡಿದೆ.

ಧುರಿ ಕ್ಷೇತ್ರದಿಂದ ಭಗವಂತ್‌ಸಿಂಗ್ ಮಾನ್ ಕಣಕ್ಕೆ: ಮುಖ್ಯಮಂತ್ರಿ ಭಗವಂತ್ ಮಾನ್ ಅವರು ಧುರಿ ವಿಧಾನಸಭಾ ಕ್ಷೇತ್ರದಿಂದಲೇ ಮತ್ತೊಮ್ಮೆ ಸ್ಪರ್ಧಿಸಲಿದ್ದಾರೆ, ಸ್ಪೀಕರ್ ಕುಲ್ತಾರ್ ಸಿಂಗ್ ಸಂಧ್ವಾನ್ ಕೊಟ್ಕಾಪುರದಿಂದ ಟಿಕೆಟ್ ನೀಡಲಾಗಿದೆ. ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಇ.ಡಿ. ವಿಚಾರಣೆ ಎದುರಿಸುತ್ತಿರುವ ಸಂಜೀವ್ ಅರೋರಾ ಅವರು ಬಂಧನದಲ್ಲಿದ್ದು, ಆದರೂ, ಅವರಿಗೆ ಲುಧಿಯಾನ ಪಶ್ಚಿಮ ಕ್ಷೇತ್ರದಿಂದ ಅಭ್ಯರ್ಥಿಯಾಗಿ ಅವಕಾಶ ಕಲ್ಪಿಸಲಾಗಿದೆ.

ನವದೆಹಲಿಯ ಕರ್ನಾಟಕ ಭವನದಲ್ಲಿ 71ನೇ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಶನಿವಾರ ಆಯೋಜಿಸಿದ್ದ ರಕ್ತದಾನ ಶಿಬಿರ, ನೇತ್ರ ತಪಾಸಣಾ ಶಿಬಿರ ಮತ್ತು ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ನಿವಾಸಿ ಆಯುಕ್ತ ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ ಡಾ. ಸಮೀರ್ ಶುಕ್ಲಾ, ಐಎಎಸ್ ಉದ್ಘಾಟಿಸಿದರು. ನವದೆಹಲಿಯ ಕರ್ನಾಟಕ ಭವನದ ವೈದ್ಯಾಧಿಕಾರಿ ಡಾ. ಟಿ. ಕಾರ್ತಿಕ್, ಸಹಾಯಕ ನಿವಾಸಿ ಆಯುಕ್ತ ಸಿ. ಮೋಹನ್ ಕುಮಾರ್, ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ಎಚ್.ಆಂಜನೇಯ ಹಾಗೂ ಕರ್ನಾಟಕ ಭವನದ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

ದೆಹಲಿಯಲ್ಲಿ ಮಾಲಿನ್ಯ ನಿಯಂತ್ರಣಕ್ಕೆ ಕ್ರಮ: ಸರ್ಕಾರಿ ಕಚೇರಿಗಳಲ್ಲಿ ಶೇ.50 ಸಿಬ್ಬಂದಿಗೆ ಮಾತ್ರ ಕೆಲಸ

ನವದೆಹಲಿ, ಅ.31: ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಾಯುಮಾಲಿನ್ಯ ಪ್ರಮಾಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮಾಲಿನ್ಯ ನಿಯಂತ್ರಣಕ್ಕೆ ದೆಹಲಿ ಸರ್ಕಾರ ಹಲವು ಕಠಿಣ ಕ್ರಮಗಳನ್ನು ಕೈಗೊಂಡಿದೆ. ನವೆಂಬರ್ 1ರಿಂದ ಬಿಎಸ್–6 ಮಾನದಂಡಕ್ಕಿಂತ ಕೆಳಗಿನ ಹೊರರಾಜ್ಯಗಳಲ್ಲಿ ನೋಂದಣಿಯಾದ ವಾಹನಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದ್ದು, ಸರ್ಕಾರಿ ಮತ್ತು ಖಾಸಗಿ ಕಚೇರಿಗಳಲ್ಲಿ ಶೇ.50ರಷ್ಟು ಸಿಬ್ಬಂದಿಗೆ ಮಾತ್ರ ಕಚೇರಿಯಿಂದ ಕೆಲಸ ಮಾಡುವಂತೆ ಸೂಚಿಸಲಾಗಿದೆ. ಉಳಿದ ಸಿಬ್ಬಂದಿಗೆ ಮನೆಯಿಂದಲೇ ಕೆಲಸ ಮಾಡುವ ವ್ಯವಸ್ಥೆ ಕಲ್ಪಿಸುವಂತೆ ನಿರ್ದೇಶನ ನೀಡಲಾಗಿದೆ.

ದೆಹಲಿ ಹೊರಭಾಗಗಳಲ್ಲಿ ನೋಂದಣಿಯಾಗಿರುವ ಬಿಎಸ್–3 ಮತ್ತು ಬಿಎಸ್–4 ಪೆಟ್ರೋಲ್ ಹಾಗೂ ಡೀಸೆಲ್ ವಾಹನಗಳಿಗೆ ದೆಹಲಿ ಪ್ರವೇಶಿಸಲು ಅವಕಾಶ ಇರುವುದಿಲ್ಲ. ಈ ನಿರ್ಬಂಧ 2027ರ ಜನವರಿ 31ರವರೆಗೆ ಜಾರಿಯಲ್ಲಿರಲಿದೆ. ಆದರೆ ಬಿಎಸ್–6 ವಾಹನಗಳು, ಸಿಎನ್‌ಜಿ ಮತ್ತು ವಿದ್ಯುತ್ ಚಾಲಿತ ವಾಹನಗಳಿಗೆ ಪ್ರವೇಶಕ್ಕೆ ಅವಕಾಶ ನೀಡಲಾಗಿದೆ. ದೆಹಲಿಯಲ್ಲೇ ನೋಂದಣಿಯಾಗಿರುವ ವಾಹನಗಳಿಗೆ ಈ ನಿರ್ಬಂಧದಿಂದ ವಿನಾಯಿತಿ ನೀಡಲಾಗಿದೆ.

ಬಿಎಸ್-6ಕ್ಕಿಂತ ಕೆಳಗಿನ ಹೊರರಾಜ್ಯಗಳ ವಾಹನಗಳ ಪ್ರವೇಶಕ್ಕೆ ದೆಹಲಿ ಸರ್ಕಾರ ನಿರ್ಬಂಧ

ನಿಯಮ ಉಲ್ಲಂಘಿಸುವ ವಾಹನಗಳ ವಿರುದ್ಧ ಕ್ರಮಕ್ಕೆ ಸೂಚನೆ

ಇನ್ನು ದೆಹಲಿಯ ಗಡಿಗಳಲ್ಲಿ ವಾಹನಗಳ ಸಂಚಾರದ ಮೇಲೆ ನಿಗಾ ಇಡಲು ಸ್ವಯಂಚಾಲಿತ ನಂಬರ್ ಪ್ಲೇಟ್ ಗುರುತಿಸುವಿಕೆ ಕ್ಯಾಮರಾಗಳು ಹಾಗೂ ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನ ಬಳಸಲಾಗುತ್ತದೆ. ನಿಯಮ ಉಲ್ಲಂಘಿಸುವ ವಾಹನಗಳ ವಿರುದ್ಧ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಹಲವು ಸೇವೆಗಳಿಗೆ ವಿನಾಯಿತಿ

ಹಾಲು, ತರಕಾರಿ, ಹಣ್ಣು, ಔಷಧ ಸೇರಿದಂತೆ ಅಗತ್ಯ ವಸ್ತುಗಳನ್ನು ಸಾಗಿಸುವ ವಾಹನಗಳಿಗೂ ನಿರ್ಬಂಧದಿಂದ ವಿನಾಯಿತಿ ಕಲ್ಪಿಸಲಾಗಿದೆ. ಇದೇ ವೇಳೆ ದೆಹಲಿಯಲ್ಲಿ ಸಂಚರಿಸುವ ಎಲ್ಲ ವಾಹನಗಳು ಮಾನ್ಯವಾದ ಮಾಲಿನ್ಯ ನಿಯಂತ್ರಣ ಪ್ರಮಾಣಪತ್ರ (ಪಿಯುಸಿ) ಹೊಂದಿರುವುದು ಕಡ್ಡಾಯವಾಗಿದೆ. ಪಿಯುಸಿ ಪ್ರಮಾಣಪತ್ರ ಇಲ್ಲದ ವಾಹನಗಳಿಗೆ ಪೆಟ್ರೋಲ್ ಅಥವಾ ಡೀಸೆಲ್ ವಿತರಿಸದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಇದಲ್ಲದೆ, ವಾಯುಮಾಲಿನ್ಯ ನಿಯಂತ್ರಣ ಆಯೋಗ (ಸಿಎಕ್ಯೂಎಂ) ದೆಹಲಿ ಸೇರಿದಂತೆ ರಾಷ್ಟ್ರೀಯ ರಾಜಧಾನಿ ವಲಯದಾದ್ಯಂತ ನವೆಂಬರ್ 5ರಿಂದ 20ರವರೆಗೆ ಧೂಳು ಉತ್ಪಾದಿಸುವ ನಿರ್ಮಾಣ ಮತ್ತು ಕಟ್ಟಡಗಳ ನೆಲಸಮ ಕಾರ್ಯಗಳಿಗೆ ನಿರ್ಬಂಧ ವಿಧಿಸಿದೆ. ರೈಲ್ವೆ, ಮೆಟ್ರೋ, ವಿಮಾನ ನಿಲ್ದಾಣ, ಆಸ್ಪತ್ರೆ, ನೀರು ಸರಬರಾಜು, ನೈರ್ಮಲ್ಯ, ರಾಷ್ಟ್ರೀಯ ಭದ್ರತೆ ಹಾಗೂ ಪ್ರಮುಖ ಸಾರ್ವಜನಿಕ ಮೂಲಸೌಕರ್ಯ ಯೋಜನೆಗಳಿಗೆ ವಿನಾಯಿತಿ ನೀಡಲಾಗಿದೆ. ಈ ಕಚೇರಿ ನಿಯಮ ದೆಹಲಿ ಮಾತ್ರವಲ್ಲದೆ ಹರಿಯಾಣದ ಗುರುಗ್ರಾಮ, ಫರಿದಾಬಾದ್, ಸೋನಿಪತ್ ಹಾಗೂ ಉತ್ತರ ಪ್ರದೇಶದ ಗಾಜಿಯಾಬಾದ್ ಮತ್ತು ಗೌತಮಬುದ್ಧ ನಗರ ಜಿಲ್ಲೆಗಳಿಗೂ ಅನ್ವಯಿಸಲಿದೆ. ಅಗತ್ಯ ಸೇವೆಗಳು ಮತ್ತು ಮನೆಯಿಂದ ಕೆಲಸ ಮಾಡಲು ಸಾಧ್ಯವಾಗದ ಕೈಗಾರಿಕಾ ಘಟಕಗಳಿಗೆ ವಿನಾಯಿತಿ ಇರಲಿದೆ

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ನವೆಂಬರ್ 1, 2026, ಭಾನುವಾರ

ಒಳಪುಟಗಳಲ್ಲಿ

ದಾಖಲೆಯಿಲ್ಲದ ಗ್ರಾಮಠಾಣಾ ಆಸ್ತಿಗೆ ಇ-ಸ್ವತ್ತು ನೀಡಲು ನಿರ್ಧಾರ- ಪು.7

ಬೆಂಗಳೂರು ಪ್ರೆಸ್‌ಕ್ಲಬ್ ಚುನಾವಣೆ ಹಠಾತ್ ಮುಂದೂಡಿಕೆ

ಬೆಂಗಳೂರು, ಅ.31: ನವೆಂಬರ್ 15ರಂದು ನಿಗದಿಯಾಗಿದ್ದ ಪ್ರೆಸ್ ಕ್ಲಬ್ ಆಫ್ ಬೆಂಗಳೂರು ಆಡಳಿತ ಮಂಡಳಿ ಚುನಾವಣೆ ಪ್ರಕ್ರಿಯೆವನ್ನು ಹಠಾತ್ ಆಗಿ ಮುಂದೂಡಲಾಗಿದೆ. ಈ ಸಂಬಂಧ ಹೈಕೋರ್ಟ್‌ನಲ್ಲಿ ಪ್ರಕರಣದ ವಿಚಾರಣೆ ಮುಂದೂಡಿಕೆಯಾದ ಕಾರಣ ಕೋರ್ಟ್ ಆದೇಶ ನಿರೀಕ್ಷಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಸದಸ್ಯರು ಸಹಕರಿಸಬೇಕೆಂದು ಪ್ರೆಸ್ ಕ್ಲಬ್ ಆಫ್ ಬೆಂಗಳೂರು ಮುಖ್ಯ ಚುನಾವಣಾಧಿಕಾರಿ ಬಿ.ವಿ. ಚೇತನ್ ಕುಮಾರ್ ಮನವಿ ಮಾಡಿದ್ದಾರೆ.

ಸಿಇಸಿ ವಿರುದ್ಧದ ಇಂಡಿಯಾ ಕೂಟದಿಂದ ಇಂದು ದಿಲ್ಲಿ ಚಲೋ ರ‍್ಯಾಲಿ

250 ಸಿಸಿಟಿವಿ ಕ್ಯಾಮರಾಗಳ ಅಳವಡಿಕೆ, ಭದ್ರತೆಗೆ 3,500 ಪೊಲೀಸರು, ಅರೆಸೇನಾ ಪಡೆಗಳ ನಿಯೋಜನೆ

ಇಂಡಿಯಾ ಒಕ್ಕೂಟದ ಪ್ರತಿಭಟನೆಗೆ ಸಿದ್ಧಗೊಂಡಿರುವ ದೆಹಲಿಯ ರಾಮಲೀಲಾ ಮೈದಾನ

ನವದೆಹಲಿ, ಅ.31: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿನ ಅಕ್ರಮಗಳನ್ನು ಆರೋಪಿಸಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಒತ್ತಾಯಿಸಿ ರಾಷ್ಟ್ರ ರಾಜಧಾನಿ ದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆಯಲಿರುವ ಇಂಡಿಯಾ ಮೈತ್ರಿಕೂಟದ ಬೃಹತ್ ಸಮಾವೇಶದ ಹಿನ್ನೆಲೆಯಲ್ಲಿ ದೆಹಲಿ ಪೊಲೀಸರು ಬಿಗಿ ಭದ್ರತಾ ವ್ಯವಸ್ಥೆ ಕೈಗೊಂಡಿದ್ದಾರೆ. ಸಮಾವೇಶದಲ್ಲಿ ಸಾವಿರಾರು ಜನರು ಭಾಗವಹಿಸುವ ನಿರೀಕ್ಷೆಯಿರುವುದರಿಂದ ಪೊಲೀಸ್ ಇಲಾಖೆ ಬಹುಹಂತದ ಭದ್ರತಾ ಕ್ರಮಗಳನ್ನು ಜಾರಿಗೊಳಿಸಿದೆ.

ಸಮಾವೇಶದ ಭದ್ರತೆಗಾಗಿ ಸುಮಾರು 3,000ರಿಂದ 3,500 ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲು ನಿರ್ಧರಿಸಲಾಗಿದೆ. ಸ್ಥಳೀಯ ಪೊಲೀಸರ ಜೊತೆಗೆ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಸಿಬ್ಬಂದಿಯನ್ನೂ ಭದ್ರತಾ ಕಾರ್ಯಕ್ಕೆ ಬಳಸಿಕೊಳ್ಳಲಾಗುತ್ತಿದೆ. ಸಮಾವೇಶ ನಡೆಯುವ ರಾಮಲೀಲಾ ಮೈದಾನ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಮೇಲೆ ನಿಗಾ ಇರಿಸಲು 200ರಿಂದ 250 ಹೈಡೆಫಿನಿಷನ್ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗುತ್ತಿದೆ.

ಕ್ಯಾಮೆರಾಗಳ ದೃಶ್ಯಾವಳಿಗಳನ್ನು ವೀಕ್ಷಿಸಲು ವಿಶೇಷ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲಾಗಿದ್ದು, ಕೃತಕ ಬುದ್ಧಿಮತ್ತೆ ಆಧಾರಿತ ಕ್ಯಾಮರಾಗಳು ಹಾಗೂ ಪೊಲೀಸರ ದೇಹಕ್ಕೆ ಅಳವಡಿಸುವ ಕ್ಯಾಮರಾಗಳನ್ನೂ ಬಳಸಲಾಗುತ್ತದೆ. ಇದರಿಂದ ಜನರ ಚಲನವಲನ ಹಾಗೂ ಅನುಮಾನಾಸ್ಪದ ಚಟುವಟಿಕೆಗಳ ಮೇಲೆ ನಿಗಾ ಇಡಲು ಕ್ರಮ ಕೈಗೊಳ್ಳಲಾಗಿದೆ.

ಭದ್ರತಾ ನಿರ್ವಹಣೆ ಸುಲಭವಾಗುವಂತೆ ರಾಮಲೀಲಾ ಮೈದಾನವನ್ನು 14 ವಲಯಗಳಾಗಿ ವಿಂಗಡಿಸಲಾಗಿದೆ. ಪ್ರತಿ ವಲಯದ ಉಸ್ತುವಾರಿಯನ್ನು ಸಹಾಯಕ ಪೊಲೀಸ್ ಆಯುಕ್ತರ ದರ್ಜೆಯ ಅಧಿಕಾರಿಗಳಿಗೆ ವಹಿಸಲಾಗಿದೆ. ಈ ವಲಯಗಳನ್ನು ಹಿರಿಯ ಪೊಲೀಸ್ ಅಧಿಕಾರಿಗಳ ಮೇಲ್ವಿಚಾರಣೆಯಲ್ಲಿಯೂ ಇರಿಸಲಾಗುತ್ತದೆ. ಮೈದಾನದ ಒಟ್ಟು ಎಂಟು ಪ್ರವೇಶ ದ್ವಾರಗಳ ಪೈಕಿ ಸಾರ್ವಜನಿಕರ ಪ್ರವೇಶಕ್ಕೆ ಕೇವಲ ಮೂರು ದ್ವಾರಗಳನ್ನು ತೆರೆಯಲಾಗುತ್ತದೆ. ಗಣ್ಯರು ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಪ್ರತ್ಯೇಕ ಪ್ರವೇಶ ದ್ವಾರಗಳ ವ್ಯವಸ್ಥೆ ಮಾಡಲಾಗಿದೆ. ಸಮಾವೇಶಕ್ಕೆ ಆಗಮಿಸುವವರನ್ನು ಎರಡು ಹಂತಗಳಲ್ಲಿ ತಪಾಸಣೆ ನಡೆಸಲಾಗುತ್ತದೆ. ಲೋಹಶೋಧಕ ಯಂತ್ರಗಳು, ಬ್ಯಾಗ್ ತಪಾಸಣೆ ವ್ಯವಸ್ಥೆ ಹಾಗೂ ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗುತ್ತಿದೆ.

ತುರ್ತುಪರಿಸ್ಥಿತಿಯಲ್ಲಿ ಜನರನ್ನು ಸುರಕ್ಷಿತವಾಗಿ ಹೊರಗೆ ಕರೆದೊಯ್ಯಲು ಪ್ರತ್ಯೇಕ ನಿರ್ಗಮನ ಮಾರ್ಗವನ್ನೂ ಸಿದ್ಧಪಡಿಸಲಾಗಿದೆ. ಸಮಾವೇಶದ ಹೆಸರಿನಲ್ಲಿ ಅನುಮತಿಯಿಲ್ಲದೆ ಮೆರವಣಿಗೆ ನಡೆಸಿ ನಗರದ ಇತರ ಪ್ರದೇಶಗಳಿಗೆ ತೆರಳುವುದನ್ನು ತಡೆಯಲು ಪೊಲೀಸರು ವಿಶೇಷ ನಿಗಾ ವಹಿಸಲಿದ್ದಾರೆ.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿನ ಅಕ್ರಮಗಳನ್ನು ಆರೋಪಿಸಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಒತ್ತಾಯಿಸಿ ಇಂಡಿಯಾ ಮೈತ್ರಿಕೂಟ ಈ ಸಮಾವೇಶ ಆಯೋಜಿಸಿದೆ. ಭಾನುವಾರ ಬೆಳಗ್ಗೆ 10ರಿಂದ ಸಂಜೆ 5ರವರೆಗೆ ಸಮಾವೇಶ ನಡೆಯಲಿದೆ. ಕಾರ್ಯಕ್ರಮಕ್ಕೆ ಸ್ವಯಂಸೇವಕರು, ಕುಡಿಯುವ ನೀರು, ಮಹಿಳೆಯರಿಗೆ ಪ್ರತ್ಯೇಕ ಶೌಚಾಲಯ ಹಾಗೂ ವಾಹನ ನಿಲುಗಡೆ ವ್ಯವಸ್ಥೆ ಕಲ್ಪಿಸುವಂತೆ ಆಯೋಜಕರಿಗೂ ಪೊಲೀಸರು ಸೂಚಿಸಿದ್ದಾರೆ.

ಕಲಬೆರಕೆ, ಆಶುಚಿಯ ಆಹಾರ ಸೇವನೆಯಿಂದ ದೂರವಿರಿ: ಮುರಳೀಧರ ಹಾಲಪ್ಪ ಕರೆ

ಹಾಲಪ್ಪ ಪ್ರತಿಷ್ಠಾನದಿಂದ ನಕಲಿ, ಕಲಬೆರಕೆ ಆಹಾರ, ಔಷಧದ ಬಗ್ಗೆ ಜನಜಾಗೃತಿ ಅಭಿಯಾನ

ತುಮಕೂರು.ಅ.28: ತುಮಕೂರಿನ ಹಾಲಪ್ಪ ಪ್ರತಿಷ್ಠಾನದ ವತಿಯಿಂದ ಬೀದಿಬದಿ ವ್ಯಾಪಾರಿಗಳ ಸಂಘ, ಔಷಧ ವ್ಯಾಪಾರಿಗಳ ಸಂಘ ಹಾಗೂ ಇತರ ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಗರದ ಐಎಂಎ ಸಭಾಂಗಣದಲ್ಲಿ ಇತ್ತೀಚೆಗೆ ನಕಲಿ, ಕಲಬೆರಕೆ ಆಹಾರ, ಔಷಧಗಳ ಬಗ್ಗೆ ಜನಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

ಜಾಗೃತಿ ಅಭಿಯಾನ ಕುರಿತು ಪ್ರತಿಷ್ಠಾನದ ಅಧ್ಯಕ್ಷ ಮುರಳೀಧರ ಹಾಲಪ್ಪ ಮಾತನಾಡಿ, ಔಷಧ, ಅಹಾರ ಇವರೆಡಕ್ಕೂ ನೇರವಾದ ಸಂಬಂಧವಿದೆ. ಮನುಷ್ಯ ಕಲಬೆರಕೆರಹಿತ, ರುಚಿ–ಶುಚಿಯ ಆಹಾರ ಸೇವನೆಯಿಂದ ಔಷಧಗಳಿಂದ ದೂರವಿರಲು ಸಾಧ್ಯ. ಒಂದು ವೇಳೆ ಕಲಬೆರಕೆ, ಅಶುಚಿಯ ಆಹಾರ ಸೇವನೆಯಿಂದ ಅನಾರೋಗ್ಯಕ್ಕೆ ತುತ್ತಾಗಿ ಆಸ್ಪತ್ರೆ ಸೇರಿದಂತಹ ಸಂದರ್ಭದಲ್ಲೂ ನಕಲಿ ಇಲ್ಲವೆ ಕಲಬೆರಕೆ ಔಷಧಗಳನ್ನು ಕೊಟ್ಟು ಮತ್ತಷ್ಟು ಹಾನಿಗೊಳಗಾಗುವ ಸಾಧ್ಯತೆ ಹೆಚ್ಚಿದೆ. ಹಾಗಾಗಿ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಜಾಗೃತಿ ಅಭಿಯಾನ ಆಯೋಜಿಸಲಾಗಿದೆ ಎಂದರು.

ಬಿಸಿಯೂಟ ಸುರಕ್ಷಿತ: ಅಕ್ಷರದಾಸೋಹ ಸಹಾಯಕ ನಿರ್ದೇಶಕ ಸುಧಾಕರ್ ಮಾತನಾಡಿ, ಪ್ರಸ್ತುತ ಜಿಲ್ಲೆಯಲ್ಲಿ 10ರಿಂದ 1500 ಮಕ್ಕಳು ಇರುವ ಶಾಲೆಗಳಲ್ಲಿ ಬೆಳಗಿನ ಕ್ಷೀರಭಾಗ್ಯ, ಮಧ್ಯಾಹ್ನದ ಬಿಸಿಯೂಟ ಹಾಗೂ ಸಂಜೆ ಗಣಿಭಾದಿತ ಪ್ರದೇಶಗಳಲ್ಲಿ ದ್ವಿದಳ ಧಾನ್ಯಗಳ ಆಹಾರವನ್ನು ಮಕ್ಕಳಿಗೆ ನೀಡಲಾಗುತ್ತಿದೆ. ಕೆಲವು ಸಣ್ಣಪುಟ್ಟ ಘಟನೆಗಳನ್ನು ಹೊರತು ಪಡಿಸಿದರೆ ಉಳಿದಂತೆ ಅತ್ಯಂತ ಸುರಕ್ಷಿತವಾಗಿ ಬಿಸಿಯೂಟ ವಿತರಣೆ ನಡೆಯುತ್ತಿದೆ. ನಮ್ಮಲ್ಲಿರುವ ಬಿಸಿಯೂಟ ತಯಾರಕರಲ್ಲಿ ಶೇ70ರಷ್ಟು ಸಿಬ್ಬಂದಿ ವಿದ್ಯಾವಂತರಿದ್ದರೆ, ಶೇ30 ರಷ್ಟು ಸಿಬ್ಬಂದಿ ಅವಿದ್ಯಾವಂತರು. ಆದರೂ ಶುಚಿತ್ವಕ್ಕೆ ಹೆಚ್ಚು ಒತ್ತು ನೀಡಿ, ಮಕ್ಕಳಿಗೆ ಗುಣಮಟ್ಟದ ಪೌಷ್ಠಿಕ ಆಹಾರ ನೀಡಲಾಗುತ್ತಿದೆ ಎಂದರು.

ರಿಯಾಯಿತಿಗೆ ಮಾರುಹೋಗಬೇಡಿ: ಜಿಲ್ಲಾ ಔಷಧ ನಿಯಂತ್ರಣಾಧಿಕಾರಿಗಳಾದ ಚಂದ್ರಕಲಾ ಶಿಲ್ಪಾ ಮಾತನಾಡಿ, ಔಷಧಗಳ ಕಲಬೆರಕೆ ಮತ್ತು ಕಡಿಮೆ ಗುಣಮಟ್ಟದಿಂದ ಮನುಷ್ಯನ ಮೇಲೆ ಸಾಕಷ್ಟು ದುಷ್ಪರಿಣಾಮ ಎದುರಿಸಬೇಕಾಗುತ್ತಿದೆ. ಹಾಗಾಗಿ ಜನರು ಜಾಗೃತರಾಗಬೇಕು. ಅಧಿಕೃತ ಏಜೆನ್ಸಿಗಳಿಂದ ಸರಬರಾಜರಾಗಿರುವ ಔಷಧಗಳನ್ನು ಅಂಗಡಿಗಳಲ್ಲಿ ವೈದ್ಯರ ಸಲಹೆಯಂತೆ ಖರೀದಿಸಿ ಬಳಸಬೇಕು. ಡಿಸ್ಕೌಂಟ್‌ಗೆ ಮಾರು ಹೋಗಬೇಡಿ, ಸಾಧ್ಯವಾದಷ್ಟು ಅನ್‌ಲೈನ್‌ನಲ್ಲಿ ಔಷಧಿ ಖರೀದಿಗೆ ಕಡಿವಾಣ ಹಾಕಿ ಎಂದು ಸಲಹೆ ನೀಡಿದರು.

ಔಷಧ ವ್ಯಾಪಾರಿಗಳ ಪರವಾಗಿ ಪಂಡಿತ ಜವಹರ್, ಐಎಂಎ ಅಧ್ಯಕ್ಷ ಡಾ.ಲೋಕೇಶ್ ಬಾಬು, ಹೋಟೇಲ್ ಅಸೋಸಿಯೇಷನ್ ಅಧ್ಯಕ್ಷ ವೇದಮೂರ್ತಿ ಮಾತನಾಡಿದರು. ಚಿ.ನಾ.ಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಚಂದ್ರಶೇಖರ್, ಸೇವಾದಳದ ಕೃಷ್ಣೇಗೌಡ, ಗೋವಿಂದರಾಜು, ತುರುವೇಕೆರೆ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪ್ರಸನ್ನಕುಮಾರ್, ಸಮಾಜಸೇವಕ ನಟರಾಜುಶೆಟ್ಟಿ, ಕೊಂಡಜ್ಜಿ ಕುಮಾರ್, ಹೋಟೇಲ್ ಅಸೋಸಿಯೇಷನ್, ಬೀದಿಬದಿ ವ್ಯಾಪಾರಿಗಳ ಸಂಘದ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಅಭಿಯಾನ ಯಾರ ವಿರುದ್ಧವೂ ಅಲ್ಲ

ಔಷಧ ನಿಯಂತ್ರಣ, ಆಹಾರ ಸುರಕ್ಷತೆ ಅಧಿಕಾರಿಗಳ ಜೊತೆಗೆ, ಬಿಸಿಯೂಟ (ಅಕ್ಷರದಾಸೋಹ) ಅಧಿಕಾರಿಗಳ ಸಹ ನಮ್ಮೊಂದಿಗೆ ಈ ಅಭಿಯಾನದಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಇದನ್ನು ತಾಲೂಕು, ಹೋಬಳಿ ಮಟ್ಟಕ್ಕೆ ತೆಗೆದುಕೊಂಡು ಹೋಗುವ ಗುರಿಯಿದೆ. ಜನರಿಗೆ ಶುಚಿಯಿಂದ ಗುಣಮಟ್ಟದ, ಕಲಬೆರಕೆ ರಹಿತ ಪೌಷ್ಠಿಕ ಆಹಾರ ಹಾಗೂ ಕಲಬೆರಕೆ ರಹಿತ ಔಷಧಗಳು ದೊರೆಯುಬೇಕೆಂಬುದು ನಮ್ಮ ಗುರಿಯಾಗಿದೆ. ಇದು ಯಾರ ವಿರುದ್ಧವೂ ನಡೆಸುತ್ತಿರುವ ಹೋರಾಟವಲ್ಲ. ಬದಲಿಗೆ ಜನರಲ್ಲಿ ಜಾಗೃತಿ ಮೂಡಿಸುವ ಅಭಿಯಾನವಾಗಿದೆ ಎಂದು ಮುರಳೀಧರ ಹಾಲಪ್ಪ ತಿಳಿಸಿದರು.

ಅಸುರಕ್ಷಿತ ಆಹಾರ ಸೇವನೆ ಒಳ್ಳೆಯದಲ್ಲ

ಆಹಾರ ಸುರಕ್ಷತಾ ಅಧಿಕಾರಿ ಹರೀಶ್ ಮಾತನಾಡಿ, ತುಮಕೂರು ಜಿಲ್ಲೆಯಲ್ಲಿ 8000ಕ್ಕೂ ಅಧಿಕ ಹೋಟೆಲ್, ಉಪಹಾರ ಮಂದಿರಗಳಿವೆ. ನಮಲ್ಲಿ ನೊಂದಣಿಯಾಗಿರುವುದು ಕೇವಲ 1700 ಮಾತ್ರ. ಹೋಟೆಲ್ ಮತ್ತು ಉಪಹಾರ ಮಂದಿರಗಳಲ್ಲಿ ದೊರೆಯುವ ಆಹಾರದ ಬಗ್ಗೆ ಜನರು ಸ್ವಯಂ ಜಾಗೃತರಾಗಬೇಕು. ಕಡಿಮೆ ಹಣಕ್ಕೆ ಸಿಗುತ್ತದೆ ಎಂದು ರಸ್ತೆಬದಿಯಲ್ಲಿ, ಸುರಕ್ಷತೆ ಇಲ್ಲದ ಆಹಾರಗಳನ್ನು ಸೇವಿಸುವುದು ಆರೋಗ್ಯ ದೃಷ್ಟಿಯಿಂದ ಒಳ್ಳೆಯದಲ್ಲ. ಮನೆ ಮತ್ತು ಹೋಟೆಲ್‌ಗಳಲ್ಲಿ ಆಹಾರದ ಗುಣಮಟ್ಟ ಮತ್ತು ಶುಚಿತ್ವಕ್ಕೆ ಒತ್ತು ನೀಡಬೇಕು. ಸಾಧ್ಯವಾದಷ್ಟು ಜಂಕ್ ಫುಡ್‌ಗಳಿಂದ ದೂರ ಇರಬೇಕು.

ಕಳಪೆ ಗುಣಮಟ್ಟದ ಆಹಾರ ಪದಾರ್ಥಗಳ ಮಾರಾಟ ಕಂಡುಬಂದರೆ ಇಲಾಖೆಯ ಕ್ಯೂ.ಆರ್ ಕೋಡ್ ಬಳಸಿ ದೂರು ನೀಡುವಂತೆ ಸಲಹೆ ನೀಡಿದರು.

ಚುನಾವಣಾ ಮುಖ್ಯ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಇಂದು
(1-11-2026ಭಾನುವಾರ) ದೆಹಲಿಯಲ್ಲಿ ಪ್ರತಿಪಕ್ಷಗಳಿಂದ
ಚಲೋ ದೆಹಲಿ ಬೃಹತ್ ಪಾದಯಾತ್ರೆಯನ್ನು
ಹಮ್ಮಿಕೊಳ್ಳಲಾಗಿದೆ. ಈ ಸಂದರ್ಭದಲ್ಲಿ, ರಾಷ್ಟ್ರದ ಎಲ್ಲ ವಿರೋಧ ಪಕ್ಷಗಳು ಸೇರಿ ಲೋಕಸಭಾ
ವಿರೋಧ ಪಕ್ಷದ ನಾಯಕ
ರಾಹುಲ್‌ಗಾಂಧಿಜೀ ನೇತೃತ್ವದಲ್ಲಿ ನಡೆಯುವ
ಬೃಹತ್ ರ್‍ಯಾಲಿಯನ್ನು ಯಶಸ್ವಿಗೊಳಿಸಬೇಕೆಂದು ತಮ್ಮಲ್ಲಿ ಪ್ರಾರ್ಥನೆ.
ಕೆ.ಎಚ್.ಮುನಿಯಪ್ಪ
ಸಮಾಜ ಕಲ್ಯಾಣ ಸಚಿವರು,
ವಿಧಾನಸೌಧ, ಬೆಂಗಳೂರು.

ಚಲೋ ದಿಲ್ಲಿ ರ್‍ಯಾಲಿ ಇಂದು
1-11-2026 ಭಾನುವಾರ
ಪ್ರಜಾಪ್ರಭುತ್ವ , ಸಂವಿಧಾನ ಉಳಿವಿಗಾಗಿ ಹೋರಾಟ
ಚುನಾವಣಾ ಮುಖ್ಯ ಆಯುಕ್ತ ಜ್ಞಾನೇಶ್ ಕುಮಾರ್ ಉಚ್ಚಾಟನೆಗಾಗಿ ಹೋರಾಟ
ದೆಹಲಿಯ ರಾಮಲೀಲಾ ಮೈದಾನದಲ್ಲಿ ಇಂದು ನಡೆಯುವ ಲೋಕಸಭಾ ವಿರೋಧ ಪಕ್ಷದ ನಾಯಕ
ರಾಹುಲ್ ಗಾಂಧೀಜಿಯವರ ನೇತೃತ್ವದ 'ಚಲೋ ದಿಲ್ಲಿ' ಪಾದಯಾತ್ರೆಗೆ
ವಿರೋಧಪಕ್ಷದ ಎಲ್ಲ ಸದಸ್ಯರೂ ಕೈಜೋಡಿಸಿ,
ನೀವೂ ಬನ್ನಿ
ನಿಮ್ಮವರನ್ನೂ ಕರೆತನ್ನಿ
ಲಕ್ಷ್ಮಣ್ ಸವದಿ
ಸಹಕಾರ ಸಚಿವರು, ವಿಕಾಸಸೌಧ,
ಬೆಂಗಳೂರು.

ಪ್ರಜಾಪ್ರಭುತ್ವವನ್ನು ಉಳಿಸಲು, ಮತ ಕಳ್ಳತನವನ್ನು ನಿಲ್ಲಿಸಲು ಮತ್ತು ಸಂವಿಧಾನವನ್ನು ಉಳಿಸಲು
ದೆಹಲಿ ರಾಮಲೀಲಾ ಮೈದಾನದಲ್ಲಿ ಇಂದು (1-11-2026 ಭಾನುವಾರ)) ಹಮ್ಮಿಕೊಳ್ಳಲಾಗಿದೆ
ಚಲೋ ದಿಲ್ಲಿ ಬೃಹತ್ ರ್‍ಯಾಲಿ
ಇದು ಯಾವುದೇ ಒಂದು ರಾಜಕೀಯ ಪಕ್ಷಕ್ಕಾಗಿ ನಡೆಯುವ ಮೆರವಣಿಗೆಯಲ್ಲ,
ಇದು ಭಾರತದ ಆತ್ಮಕ್ಕಾಗಿ ನಡೆಯುವ ಮೆರವಣಿಗೆ.
ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿಜೀ ನೇತೃತ್ವದಲ್ಲಿ
ನಡೆಯುವ ಈ ಬೃಹತ್ ರ್‍ಯಾಲಿಯಲ್ಲಿ ಎಲ್ಲ ಪ್ರತಿಪಕ್ಷದವರೂ ಪಾಲ್ಗೊಳ್ಳೋಣ
ಟಿ. ರಘುಮೂರ್ತಿ
ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಚಿವರು,
ವಿಧಾನಸೌಧ, ಬೆಂಗಳೂರು.

ನೋಟಿಸ್ ಉತ್ತರಿಸದ ಕೃಪಾ ಆಳ್ವ ಪಕ್ಷದಿಂದಲೇ ಉಚ್ಚಾಟನೆ: ಬಿ.ಕೆ. ಹರಿಪ್ರಸಾದ್

ಬೆಂಗಳೂರು, ಅ.31: ಸಾರ್ವಜನಿಕ ಕ್ಷೇತ್ರದಲ್ಲಿ ನಾಯಕರಿಗೆ ಮುಜುಗರ ಉಂಟುಮಾಡುವ ಕೆಲಸದಿಂದ ಮಾಧ್ಯಮಗಳಲ್ಲಿ ಅಹಿತಕರ ಸುದ್ದಿಗಳು ಬಂದಿದ್ದವು. ಈ ವಿಚಾರವಾಗಿ ಕಾರಣ ಕೇಳಿ ಕೃಪಾ ಆಳ್ವ ಅವರಿಗೆ ನೋಟೀಸ್ ನೀಡಿ ಉತ್ತರ ನೀಡಲು ಮೂರು ದಿನಗಳ ಕಾಲಾವಕಾಶ ನೀಡಲಾಗಿತ್ತು. ಅವರಿಂದ ಉತ್ತರ ಬಾರದ ಕಾರಣ ಅವರನ್ನು ಪಕ್ಷದಿಂದ ಆರು ವರ್ಷಗಳ ಕಾಲ ಉಚ್ಚಾಟನೆ ಮಾಡಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೋಟೀಸ್ ಅವರಿಗೆ ತಲುಪಿಲ್ಲವೇ ಎಂದು ಕೇಳಿದಾಗ, ಅವರಿಗೆ ಕಳುಹಿಸಿದ ನೋಟೀಸ್ ವಾಪಸ್ ಬಂದಿದೆ. ಹೀಗಾಗಿ ಬೇರೆ ವಿಧಿ ಇಲ್ಲದೆ ಈ ಕ್ರಮ ಕೈಗೊಳ್ಳಲಾಗಿದೆ. ಕೃಪ ಆಳ್ವಾ ಅವರು ವಿದೇಶಕ್ಕೆ ಹೋಗಿರುವ ವಿಚಾರವನ್ನು ಮಹಾಮಾನವನ ಐಬಿ, ಸಿಬಿಐ ನೋಡಿಕೊಳ್ಳುತ್ತದೆ. ನಾನು ಅದರ ಬಗ್ಗೆ ನೋಡುವುದಿಲ್ಲ ಎಂದರು.

ಕೃಪಾ ಆಳ್ವಾ ಅವರ ಹಿಂದೆ ಬೇರೆ ಯಾರಾದರೂ ಇದ್ದಾರ ಎಂಬ ವಿಚಾರವಾಗಿ ಪಕ್ಷದಲ್ಲಿ ಆಂತರಿಕ ತನಿಖೆ ಮಾಡಿಸುತ್ತೀರಾ ಎಂದು ಕೇಳಿದಾಗ, ಈ ವಿಚಾರವನ್ನು ಮಹಾಮಾನವನಿಗೆ ಬಿಟ್ಟಿದ್ದೇವೆ. ಕೃಪ ಆಳ್ವಾ ಅವರ ವಿರುದ್ಧ ನೇರಸಾಕ್ಷ್ಯ ಇರುವ ಕಾರಣ ಉಚ್ಚಾಟಿಸಿದ್ದೇವೆ ಎಂದರು.

ಹಾವಿನ ಕುತ್ತಿಗೆಗೆ ಕೈಹಾಕಿ ಹಿಡಿದಿದ್ದೇವೆ

ನಾಗಪುರದಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿರುವ ಬಗ್ಗೆ ಕೇಳಿದಾಗ, ನಾಗ್ಪುರ ಎಂದರೆ ಕನ್ನಡದಲ್ಲಿ ಹಾವಿನಪುರ. ದೇಶದಲ್ಲಿ ದ್ವೇಷದ ವಿಷ ಕಾರುವ ಸಂಘಟನೆ ಕುತ್ತಿಗೆಗೆ ಕೈಹಾಕಿ ಹಿಡಿದಿದ್ದೇವೆ. ಅಲ್ಲಿ ಆರಂಭವಾಗಿದ್ದು, ದೇಶದಲ್ಲಿ ಅವರನ್ನು ಮಣಿಸುವ ಸಂದೇಶ ರವಾನಿಸುತ್ತೇವೆ. ಕಾಂಗ್ರೆಸ್ ಸೋಲಿಸಿದ್ದೇವೆ ಎಂದು ಹೇಳಿಕೊಂಡು ಹೋದರೆ ಆಗುವುದಿಲ್ಲ. ಮಹಾಮಾನವನ ಕ್ಷೇತ್ರ ವಾರಾಣಸಿಯಲ್ಲಿ ಬಹಳ ಕೆಟ್ಟದಾಗಿ ಸೋತಿದ್ದಾರೆ. ಬಿಜೆಪಿ ಅಧ್ಯಕ್ಷನ ಕ್ಷೇತ್ರ ಬಿಹಾರದಲ್ಲಿ, ನಿತಿನ್ ಗಡ್ಕರಿ ಅವರ ಕ್ಷೇತ್ರದಲ್ಲಿ, ಯೋಗಿ ಆದಿತ್ಯನಾಥ ಕ್ಷೇತ್ರದಲ್ಲಿ ಸೋತಿದ್ದಾರೆ ಎಂದು ತಿಳಿಸಿದರು.

ಪ್ರಜಾಪ್ರಭುತ್ವದ ಉಳಿವಿಗೆ ಹೋರಾಟ

ದೆಹಲಿ ಪ್ರತಿಭಟನೆ ಬಗ್ಗೆ ಕೇಳಿದಾಗ, ರಾಹುಲ್ ಗಾಂಧಿ ಅವರು ಪ್ರಜಾಪ್ರಭುತ್ವ ಹಾಗೂ ಸಂವಿಧಾನ ಉಳಿಸಲು ಹೋರಾಟಕ್ಕೆ ಕರೆ ನೀಡಿದ್ದಾರೆ. ಕರ್ನಾಟಕದಿಂದ ಹೋಗಲು ರೈಲ್ವೆಗೆ ಅನುಮತಿ ನೀಡಿರಲಿಲ್ಲ. ಆ ಮೂಲಕ ನಾವು ಭಾಗವಹಿಸಲು ತೊಂದರೆ ನೀಡಿದ್ದಾರೆ. ನಮ್ಮ ಕಾರ್ಯಕರ್ತರು ಈಗಾಗಲೇ ಸಹಸ್ರಾರು ಸಂಖ್ಯೆಯಲ್ಲಿ ದೆಹಲಿ ತಲುಪಿದ್ದು, ರಾಮಲೀಲಾ ಮೈದಾನದಲ್ಲಿ ಪ್ರಜಾಪ್ರಭುತ್ವ ಹಾಗೂ ಸಂವಿಧಾನ ರಕ್ಷಣೆಗಾಗಿ ದೊಡ್ಡ ಹೋರಾಟ ನಡೆಯಲಿದೆ ಎಂದು ತಿಳಿಸಿದರು.

ಜನವರಿಯೊಳಗೆ ಗ್ರಾಮೀಣ ಸ್ಥಳೀಯ ಸಂಸ್ಥೆ ಚುನಾವಣೆ ಶತಃಸಿದ್ಧ: ಈಶ್ವರ ಖಂಡ್ರೆ

ಬೆಂಗಳೂರು, ಅ.31: ರಾಜ್ಯ ಸರ್ಕಾರ ಅಧಿಕಾರ ವಿಕೇಂದ್ರೀಕರಣದ ಪರವಾಗಿದ್ದು, ಗ್ರಾಮೀಣ ಸ್ಥಳೀಯ ಸಂಸ್ಥೆ ಚುನಾವಣೆಗೆ ಕರಡು ಮೀಸಲು ಅಧಿಸೂಚನೆ ಹೊರಡಿಸಿದೆ. ಬರುವ ಜನವರಿಯೊಳಗೆ ಜಿಲ್ಲಾ ಪಂಚಾಯತಿ ಮತ್ತು ತಾಲೂಕು ಪಂಚಾಯತಿ ಚುನಾವಣೆಗಳು ನಡೆದೇ ನಡೆಯುತ್ತವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅ.19ರವರೆಗೆ ಕರಡು ಅಧಿಸೂಚನೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಸುಮಾರು 2 ಸಾವಿರಕ್ಕೂ ಅಧಿಕ ಆಕ್ಷೇಪಣೆ ಬಂದಿದ್ದು, ಅಧಿಕಾರಿಗಳು ನಿಯಮಾನುಸಾರ ಪರಿಶೀಲನೆ ಮಾಡುತ್ತಿದ್ದು, ಶೀಘ್ರವೇ ಅಂತಿಮ ಅಧಿಸೂಚನೆ ಹೊರಡಿಸಲಾಗುತ್ತದೆ ಎಂದರು.

ರಾಜ್ಯ ಸರ್ಕಾರ ಪ್ರಸ್ತಾವನೆ ಸಲ್ಲಿಸಿದ ತರುವಾಯ ರಾಜ್ಯ ಚುನಾವಣೆ ಆಯೋಗ, ಕೇಂದ್ರ ಚುನಾವಣೆ ಆಯೋಗದಿಂದ ಮತದಾರರ ಪಟ್ಟಿ ಪಡೆದು ಅಥವಾ ತನ್ನಲ್ಲಿರುವ ಮತದಾರರ ಪಟ್ಟಿಯನ್ನೇ ಪರಿಷ್ಕರಿಸಿ ಚುನಾವಣೆ ನಡೆಸುವ ಕುರಿತಂತೆ ಕ್ರಮ ವಹಿಸಲಿದೆ ಎಂದರು. ಬಹುತೇಕ ಜನವರಿ ಮೊದಲ ಅಥವಾ 2ನೇ ವಾರದಲ್ಲಿ ತಾಲೂಕು ಮತ್ತು ಜಿಲ್ಲಾ ಪಂಚಾಯತಿ ಚುನಾವಣೆಗಳು ನಡೆಯುತ್ತವೆ. ಈ ಚುನಾವಣೆಗಳ ತರುವಾಯ ಗ್ರಾಮ ಪಂಚಾಯತಿ ಚುನಾವಣೆಗಳು ನಡೆಯಲಿವೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

ಕೇಂದ್ರದ ವಿರುದ್ಧ ಕಬ್ಬುಬೆಳೆಗಾರರ ಹೋರಾಟಕ್ಕೆ ಬೆಂಬಲ: ಈಶ್ವರ ಖಂಡ್ರೆ

ಕಬ್ಬು ಬೆಳೆಗಾರರು ನ್ಯಾಯಸಮ್ಮತ ಮತ್ತು ಲಾಭದಾಯಕ (ಎಫ್.ಆರ್.ಪಿ.) ದರ ಘೋಷಣೆಗೆ ಒತ್ತಾಯಿಸಿ ಕೇಂದ್ರದ ವಿರುದ್ಧ ನಡೆಸುತ್ತಿರುವ ಹೋರಾಟಕ್ಕೆ ನಮ್ಮ ಬೆಂಬಲ ಇದೆ ಎಂದು ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಸಕ್ಕರೆ ಕಾರ್ಖಾನೆಗಳೂ ಉಳಿಯಬೇಕು, ಅದೇ ರೀತಿ ರೈತರಿಗೂ ಲಾಭದಾಯಕ ಬೆಲೆ ದೊರಕಬೇಕು, ಆದರೆ ಕೇಂದ್ರ ಸರ್ಕಾರ ಈ ಬಗ್ಗೆ ಚಿಂತನೆಯನ್ನೇ ಮಾಡುತ್ತಿಲ್ಲ. ಕಬ್ಬಿನ ಎಫ್.ಆರ್.ಪಿ. ದರ ಹೆಚ್ಚಿಸಬೇಕು, ಬಡ ಜನರಿಗೆ ರಿಯಾಯಿತಿ ದರದಲ್ಲಿ ಪಡಿತರ ಸಕ್ಕರೆ ವಿತರಿಸಬೇಕು ಎಂದು ಆಗ್ರಹಿಸಿದರು.

ಸುಧಾಕರ್ ಅವರ ನಿಧನದಿಂದ ತೆರವಾಗಿರುವ ಹಿರಿಯೂರು ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಎದುರಿಸಲು ಕಾಂಗ್ರೆಸ್ ಪಕ್ಷ ಸಂಪೂರ್ಣ ಸಜ್ಜಾಗಿದೆ ಎಂದು ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

ಕೇಂದ್ರ ಚುನಾವಣಾ ಆಯೋಗ ಇನ್ನೂ ವೇಳಾಪಟ್ಟಿ, ಚುನಾವಣೆ ದಿನಾಂಕ ಪ್ರಕಟಿಸಿಲ್ಲ. ಯಾರನ್ನೂ ಕಣಕ್ಕಿಳಿಸಬೇಕು ಎಂಬ ಬಗ್ಗೆ ಪಕ್ಷದ ವರಿಷ್ಠರು ತೀರ್ಮಾನಿಸಲಿದ್ದಾರೆ. ಯಾವಾಗ ಚುನಾವಣೆ ನಡೆಸಿದರೂ ಎದುರಿಸಲು ನಾವು ಸಿದ್ಧ. ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆದ್ದೇ ಗೆಲ್ಲುತ್ತದೆ ಎಂದರು.

ದಾಖಲೆಯಿಲ್ಲದ ಗ್ರಾಮಠಾಣಾ ಆಸ್ತಿಗೆ ಇ-ಸ್ವತ್ತು ನೀಡಲು ನಿರ್ಧಾರ

ನ.2ರಿಂದ ಅರ್ಜಿ ಸ್ವೀಕಾರ, 25-30 ಲಕ್ಷ ಆಸ್ತಿ ಮಾಲೀಕರಿಗೆ ಅನುಕೂಲ: ಸಚಿವ ಈಶ್ವರ ಖಂಡ್ರೆ

ಬೆಂಗಳೂರು, ಅ.31: ಗ್ರಾಮಠಾಣಾ ವ್ಯಾಪ್ತಿಯಲ್ಲಿ ದಾಖಲೆ ಇರುವ ಮತ್ತು ದಾಖಲೆಗಳು ಇಲ್ಲದ ಆಸ್ತಿಗಳಿಗೆ ಇ-ಸ್ವತ್ತು ನೀಡಲು ಸರ್ಕಾರ ನಿರ್ಧರಿಸಿದ್ದು, ನ.2ರಿಂದ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಮೀಣ ಆಸ್ತಿ ಮಾಲೀಕರ ಬಹು ದಿನಗಳ ಸಮಸ್ಯೆ ಪರಿಹರಿಸಲು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳಿಗೆ ತಿದ್ದುಪಡಿ ಮಾಡಿ, ಅಧಿಸೂಚನೆ ಹೊರಡಿಸಲಾಗಿದ್ದು, ಇ-ಸ್ವತ್ತು 2 ತಂತ್ರಾಂಶದಲ್ಲೂ ಕೆಲವು ಮಾರ್ಪಾಡು ಮಾಡಲಾಗಿದೆ ಎಂದು ತಿಳಿಸಿದರು.

ಗ್ರಾಮಠಾಣಾ ವ್ಯಾಪ್ತಿಯಲ್ಲಿ ಹಲವಾರು ತಲೆಮಾರುಗಳಿಂದ ವಾಸಿಸುತ್ತಿರುವ ಅಂದಾಜು 25–30 ಲಕ್ಷ ನಿವಾಸಿಗಳಿಗೆ ಇದರಿಂದ ಅನುಕೂಲವಾಗಲಿದೆ. ದಾಖಲೆಗಳು ಲಭ್ಯವಿಲ್ಲದ ಗ್ರಾಮಠಾಣಾ ಆಸ್ತಿಗಳಿಗೆ ನೋಂದಾಯಿತ ದಾಖಲೆಗಳಿಂದ ವಿನಾಯಿತಿ ನೀಡಲಾಗಿದ್ದು, 2025 ಏ.7ರ ಪೂರ್ವದ ವಿದ್ಯುತ್ ಬಿಲ್ ಆಧಾರದ ಮೇಲೆ ಹಾಗೂ ಸ್ಥಳ ಪರಿಶೀಲನೆ ಮಾಡಿ ಇ-ಸ್ವತ್ತು ನೀಡಲಾಗುವುದು ಎಂದು ತಿಳಿಸಿದರು.

ಈ ರೀತಿ ದಾಖಲೆ ಇಲ್ಲದವರಿಗೆ ಇ-ಸ್ವತ್ತು ನೀಡುವಾಗ ನ್ಯಾಯಾಲಯದಲ್ಲಿ ವ್ಯಾಜ್ಯ ಏನಾದರೂ ಇದ್ದರೆ, ಭಾಗಕ್ಕಾಗಿ ತಗಾದೆ ಇದ್ದರೆ, ಅಥವಾ ಅರ್ಜಿ ಸಲ್ಲಿಸಿದವರು ಮೂಲ ಮಾಲೀಕರಲ್ಲದಿದ್ದಲ್ಲಿ ಅಥವಾ ಇನ್ನಾವುದೇ ಸಿಂಧುವಾದ ಕಾರಣವಿದ್ದಲ್ಲಿ ಮುಂದಿನ ದಿನಗಳಲ್ಲಿ ಕಾನೂನು ತೊಡಕು ಎದುರಾಗದಂತೆ, ಸ್ವತ್ತಿನ ಮಾಲೀಕರಿಂದ ಪ್ರಮಾಣಪತ್ರ ಪಡೆದು, ಅವರು ಸಲ್ಲಿಸಿರುವ ಮಾಹಿತಿ ತಪ್ಪಾಗಿದ್ದಲ್ಲಿ ಇ-ಸ್ವತ್ತು ಪ್ರಮಾಣ ಪತ್ರ ರದ್ದು ಮಾಡಬಹುದು ಎಂದು ಮುಚ್ಚಳಿಕೆ ಬರೆಸಿಕೊಳ್ಳಲಾಗುವುದು ಎಂದೂ ತಿಳಿಸಿದರು.

ವಸತಿ ಯೋಜನೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಯಾವುದೇ ಹಕ್ಕು ಪತ್ರ ಪಡೆದಿದ್ದು ಪ್ರಸ್ತುತ ಸದರಿ ಹಕ್ಕುಪತ್ರ ಲಭ್ಯವಿಲ್ಲದಿದ್ದರೂ ಕೂಡ ಹಕ್ಕುಪತ್ರ ವಿತರಣಾ ಪ್ರಾಧಿಕಾರದ ದೃಢೀಕರಣ ಪತ್ರ ಪಡೆದು ಇ -ಸ್ವತ್ತು ಪಡೆಯಲು ಅವಕಾಶ ಕಲ್ಪಿಸಲಾಗಿದೆ, ಮಲೆನಾಡು ಪ್ರದೇಶಗಳಿಗೆ ಅನುಕೂಲವಾಗುವಂತೆ ಕಣ ಮನೆ / ಮನೆದಳ ಆಸ್ತಿಗಳಿಗೂ ಇ-ಸ್ವತ್ತು ನೀಡಲಾಗುವುದು ಎಂದರು.

ಬಿ ಖಾತೆ ವಿಧಾನದ ಸರಳೀಕರಣ

ನಮೂನೆ 11 ಬಿ ಪಡೆಯುವ ವಿಧಾನವನ್ನು ಸರಳೀಕರಣಗೊಳಿಸಿ ಗ್ರಾಮೀಣ ಭಾಗದ ಜನರು ಯಾವುದೇ ನೋಂದಾಯಿತ ಪತ್ರ ಇಲ್ಲದೆ ತಮ್ಮ ಕೃಷಿ ಜಮೀನಿನಲ್ಲಿ ವಾಸ/ಕೃಷಿ ಉಪಯೋಗಕ್ಕೆ ನಿರ್ಮಿಸಿರುವ ಕಟ್ಟಡಗಳಿಗೆ ಇ-ಸ್ವತ್ತು ನಮೂನೆ 11 ಬಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಕೃಷಿ ಭೂಮಿಯಲ್ಲಿ ವಸತಿ ಯೋಜನೆಯಡಿಯಲ್ಲಿ ಸೃಜನೆಯಾಗಿರುವ ಕಟ್ಟಡಗಳಿಗೆ ಮತ್ತು ಪಾರಂಪರಿಕವಾಗಿ ಅರಣ್ಯವಾಸಿಗಳು, ಅರಣ್ಯ ಭಾಗದಲ್ಲಿ ವಾಸವಾಗಿರುವವರು ಅರಣ್ಯ ಹಕ್ಕು ಕಾಯಿದೆಯಂತೆ ಹಕ್ಕು ಪತ್ರ ಪಡೆದಿದ್ದಲ್ಲಿ ಅಂತಹ ಆಸ್ತಿಗಳಿಗೆ ನಮೂನೆ ಪಡೆಯಲು ಈ ತಿದ್ದುಪಡಿ ನಿಯಮದಲ್ಲಿ ಅವಕಾಶ ನೀಡಲಾಗಿದೆ ಎಂದರು. ಹಿತ್ತಲು, ಮನೆಯಂಗಳ ಸೇರಿ ಒಟ್ಟು 4 ಸಾವಿರ ಚದರಡಿಯೊಳಗಿರುವ ನಿವೇಶನ, ಆಸ್ತಿಗಳಿಗೆ ಮಾತ್ರ ಇದು ಅನ್ವಯವಾಗಲಿದೆ. ಈ ತಿದ್ದುಪಡಿಯಿಂದ ಗ್ರಾಮೀಣ ಭಾಗದ ಪ್ರತಿಶತ 90 ಕ್ಕೂ ಹೆಚ್ಚು ಆಸ್ತಿಗಳಿಗೆ ನಮೂನೆ 11ಎ/11ಬಿ ನೀಡಲು ಅವಕಾಶ ಆಗಲಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

ವಿಧಾನಸೌಧದಲ್ಲಿ ಕನ್ನಡ ರಾಜ್ಯೋತ್ಸವ ಸಂಭ್ರಮ

ಕ್ವೀನ್ಸ್ ಡ್ರೈವ್ ಯೋಜನೆಯಡಿ 16 ಪಿಂಕ್ ಇ-ಆಟೋಗಳ ಲೋಕಾರ್ಪಣೆ

ಶೀ ಫಾರ್ ಸೊಸೈಟಿ ಮತ್ತು ತಲಿರು ಫೌಂಡೇಷನ್‌ನಿಂದ ಮಹಿಳಾ ಸಬಲೀಕರಣ ಯೋಜನೆ

ಬೆಂಗಳೂರು, ಅ.31: ಕನ್ನಡ ರಾಜ್ಯೋತ್ಸವದ ಸಂಭ್ರಮದ ಅಂಗವಾಗಿ ಮಹಿಳಾ ಸಬಲೀಕರಣ ಮತ್ತು ಆರ್ಥಿಕ ಸ್ವಾವಲಂಬನೆಗೆ ಉತ್ತೇಜನ ನೀಡುವ ಮಹತ್ವದ ಕಾರ್ಯಕ್ರಮ ಬೆಂಗಳೂರಿನ ವಿಧಾನಸೌಧದಲ್ಲಿ ನಡೆಯಿತು. ಶೀ ಫಾರ್ ಸೊಸೈಟಿ ಮತ್ತು ತಲಿರು ಫೌಂಡೇಷನ್‌ನಿಂದ ಕ್ವೀನ್ಸ್ ಡ್ರೈವ್ ಯೋಜನೆಯಡಿ 16 ವಿಶೇಷವಾಗಿ ವಿನ್ಯಾಸಗೊಳಿಸಲಾದ ಪಿಂಕ್ ಎಲೆಕ್ಟ್ರಿಕ್ ಆಟೋಗಳನ್ನು ಲೋಕಾರ್ಪಣೆಗೊಳಿಸಲಾಯಿತು.

ಒಂಟಿ ತಾಯಂದಿರು ಮತ್ತು ವಿಧವೆಯರಿಗೆ ಸುಸ್ಥಿರ ಜೀವನೋಪಾಯದ ಅವಕಾಶಗಳನ್ನು ಕಲ್ಪಿಸಿ, ಅವರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.

ತರಬೇತಿ ಪಡೆದ ಮಹಿಳಾ ಚಾಲಕರು ಆಟೋ ಖರೀದಿಸಲು ಅಗತ್ಯವಿರುವ ಮುಂಗಡ ಹಣವನ್ನು ಹೊಂದಿಸಲು ಎದುರಿಸುತ್ತಿರುವ ಆರ್ಥಿಕ ಸವಾಲುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕ್ವೀನ್ಸ್ ಡ್ರೈವ್ ಯೋಜನೆ ಕಾರ್ಯನಿರ್ವಹಿಸುತ್ತಿದೆ.

ಪ್ರಾಯೋಜಕತ್ವ ಮತ್ತು ವಿವಿಧ ಸಂಸ್ಥೆಗಳ ಸಹಭಾಗಿತ್ವದ ಮೂಲಕ ಮಹಿಳೆಯರಿಗೆ ಆಟೋಗಳನ್ನು ಒದಗಿಸಿ, ತಮ್ಮದೇ ಆದ ಉದ್ಯಮವನ್ನು ಆರಂಭಿಸಲು ಹಾಗೂ ಕುಟುಂಬದ ಆರ್ಥಿಕ ಸ್ಥಿತಿಯನ್ನು ಸುಧಾರಿಸಿಕೊಳ್ಳಲು ನೆರವಾಗುತ್ತಿದೆ.

ಈ ಯೋಜನೆಯ ಮೂಲಕ 100 ಮಹಿಳೆಯರನ್ನು ಸಬಲೀಕರಣಗೊಳಿಸುವುದು, 100 ಕುಟುಂಬಗಳಿಗೆ ಆರ್ಥಿಕ ಭದ್ರತೆ ಒದಗಿಸುವುದು ಮತ್ತು ಸುಸ್ಥಿರ ಜೀವನೋಪಾಯದ ಅವಕಾಶಗಳ ಮೂಲಕ ಬಲಿಷ್ಠ ಸಮುದಾಯವನ್ನು ನಿರ್ಮಿಸುವ ಗುರಿಯನ್ನು ಹೊಂದಲಾಗಿದೆ. ಕನ್ನಡ ರಾಜ್ಯೋತ್ಸವದ ಈ ಶುಭ ಸಂದರ್ಭದಲ್ಲಿ ನಡೆದ ಕಾರ್ಯಕ್ರಮದಲ್ಲಿ ಯೋಜನೆಯ ಬೆಂಬಲಿಗರು, ಪ್ರಾಯೋಜಕರು, ಮಹಿಳಾ ಬೈಕರ್‌ಗಳು ಹಾಗೂ ಲೇಡೀಸ್ ಸರ್ಕಲ್ ಇಂಡಿಯಾದ ಸದಸ್ಯರು ಭಾಗವಹಿಸಿ ಮಹಿಳಾ ಸಬಲೀಕರಣದ ಈ ಅರ್ಥಪೂರ್ಣ ಪ್ರಯತ್ನಕ್ಕೆ ತಮ್ಮ ಬೆಂಬಲ ವ್ಯಕ್ತಪಡಿಸಿದರು.

ಕ್ವೀನ್ಸ್ ಡ್ರೈವ್ ಮಹಿಳೆಯರನ್ನು ಸ್ವತಂತ್ರ ಉದ್ಯಮಿಗಳನ್ನಾಗಿ ರೂಪಿಸುವ ಹಾಗೂ ಸಮಾಜದಲ್ಲಿ ನಾಯಕತ್ವ ವಹಿಸಲು ಪ್ರೇರೇಪಿಸುವ ನವೀನ ಯೋಜನೆಯಾಗಿದೆ. ಶೀ ಫಾರ್ ಸೊಸೈಟಿ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷೆ ಹರ್ಷಿಣಿ ವೆಂಕಟೇಶ್ ನೇತೃತ್ವದಲ್ಲಿ ಹಾಗೂ ತಳಿರು ಫೌಂಡೇಷನ್ ಸಹಯೋಗದೊಂದಿಗೆ ಮಹಿಳಾ ಸಬಲೀಕರಣ ಮತ್ತು ಸುಸ್ಥಿರ ಜೀವನೋಪಾಯದ ಯೋಜನೆಗಳಿಗೆ ನಿರಂತರವಾಗಿ ಬೆಂಬಲ ನೀಡಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಶೀ ಫಾರ್ ಸೊಸೈಟಿ ಸಂಸ್ಥೆಯ ಸಂಸ್ಥಾಪಕ ಸದಸ್ಯೆ ಕವಿತಾ ಪ್ರಭಾಕರ್, ತಳಿರು ಫೌಂಡೇಷನ್‌ನ ಚಿತ್ರಾ ಪ್ರದೀಪ್, ಸುಚಿತ್ರಾ ಸಾವ್ಕರ್ ಸೇರಿದಂತೆ ಲೇಡೀಸ್ ಸರ್ಕಲ್ ಇಂಡಿಯಾದ ಸದಸ್ಯರು ಭಾಗವಹಿಸಿದ್ದರು.

ಕನ್ನಡ ರಾಜ್ಯೋತ್ಸವದ ಸಂಭ್ರಮದೊಂದಿಗೆ ಮಹಿಳೆಯರ ಸ್ವಾವಲಂಬನೆ ಮತ್ತು ಸಬಲೀಕರಣಕ್ಕೆ ಹೊಸದಿಕ್ಕು ನೀಡಿದ ಈ ಕಾರ್ಯಕ್ರಮವು ಸಮಾಜದಲ್ಲಿ ಮಹಿಳೆಯರ ಆರ್ಥಿಕ ಸ್ವಾತಂತ್ರ್ಯಕ್ಕೆ ಮಹತ್ವದ ಹೆಜ್ಜೆಯಾಗಿದೆ.

ಇ-ಖಾತೆ ಪ್ರಕ್ರಿಯೆ ಮತ್ತಷ್ಟು ಸುಲಭ: ಇಂದಿನಿಂದ ಮತ್ತೆ ನನ್ನ ಖಾತೆ - ನನ್ನ ಹಕ್ಕು ಅಭಿಯಾನ

ಬೆಂಗಳೂರು, ಅ.31– ನಗರದ ಆಸ್ತಿ ಮಾಲೀಕರಿಗೆ ಇ-ಖಾತಾ ಪಡೆಯುವ ಪ್ರಕ್ರಿಯೆಯನ್ನು ಮತ್ತಷ್ಟು ಸುಲಭಗೊಳಿಸುವ ಉದ್ದೇಶದಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಇಂದಿನಿಂದ ನನ್ನ ಇ-ಖಾತಾ, ನನ್ನ ಹಕ್ಕು ಅಭಿಯಾನವನ್ನು ಪುನರಾರಂಭಿಸಿದೆ.

ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ 62 ಸಹಾಯಕ ಕಂದಾಯ ಅಧಿಕಾರಿ (ಎಆರ್‌ಒ) ಕಚೇರಿಗಳಲ್ಲಿ ಈ ಮೇಳ ನಡೆಯಲಿದ್ದು, ನಾಗರಿಕರು ತಮ್ಮ ಆಸ್ತಿಗೆ ಸಂಬಂಧಿಸಿದ ಇ-ಖಾತಾ ಸೇವೆಗಳನ್ನು ಪಡೆದುಕೊಳ್ಳಬಹುದು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅವರ ನಿರ್ದೇಶನದ ಮೇರೆಗೆ ಅಭಿಯಾನವನ್ನು ಮರು ಆರಂಭಿಸಲಾಗುತ್ತಿದೆ. ಇ-ಖಾತಾ ಪಡೆಯುವುದು, ಹೊಸ ಖಾತೆ ಮಾಡಿಸಿಕೊಳ್ಳುವುದು ಹಾಗೂ ಖಾತಾಗೆ ಸಂಬಂಧಿಸಿದ ಇತರ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ನಾಗರಿಕರಿಗೆ ಈ ಅಭಿಯಾನ ನೆರವಾಗಲಿದೆ. ನಾಗರಿಕರು ತಮ್ಮ ಸಮೀಪದ ಅಭಿಯಾನದ ಕೇಂದ್ರಕ್ಕೆ ಭೇಟಿ ನೀಡಿ ಅಗತ್ಯ ಮಾಹಿತಿ ಮತ್ತು ಸೇವೆಗಳನ್ನು ಪಡೆದುಕೊಳ್ಳಬಹುದು ಎಂದು ಜಿಬಿಎ ಕಂದಾಯ ವಿಭಾಗದ ಅಧಿಕಾರಿಗಳು ತಿಳಿಸಿದ್ದಾರೆ.

ಸ್ವತಃ ಅರ್ಜಿ ಸಲ್ಲಿಸಲು ಅವಕಾಶ:

ಇ-ಖಾತಾ ಪಡೆಯಲು ಮಧ್ಯವರ್ತಿ ಗಳ ನೆರವು ಪಡೆಯುವ ಬದಲು ನಾಗರಿಕರೇ ಸ್ವತಃ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಂತೆ ಜಿಬಿಎ ಉತ್ತೇಜಿಸುತ್ತಿದೆ. ಇ-ಖಾತಾ ಸೇವೆಗಳಿಗೆ ಸಂಬಂಧಿಸಿದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಕುರಿತು ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ಮಾಹಿತಿ ನೀಡುವ ವಿಡಿಯೋಗಳನ್ನು ಜಿಬಿಎಯ ಯೂಟ್ಯೂಬ್ ಚಾನೆಲ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆ.

ನಾಗರಿಕರು ಈ ವಿಡಿಯೋಗಳನ್ನು ವೀಕ್ಷಿಸಿ ಅರ್ಜಿ ಸಲ್ಲಿಸುವ ವಿಧಾನವನ್ನು ತಿಳಿದುಕೊಳ್ಳಬಹುದು. ಬಳಿಕ ಜಿಬಿಎಯ ಇ-ಆಸ್ತಿ ಪೋರ್ಟಲ್‌ಗೆ ಭೇಟಿ ನೀಡಿ ಅಗತ್ಯ ವಿವರಗಳನ್ನು ಒದಗಿಸುವ ಮೂಲಕ ಸುಲಭವಾಗಿ ಅರ್ಜಿ ಸಲ್ಲಿಸಬಹುದು. ಇ-ಖಾತಾ ಕುರಿತ ಹೆಚ್ಚಿನ ಮಾಹಿತಿಗಾಗಿ ಆಯಾ ನಗರ ಪಾಲಿಕೆಗಳ ಕಂದಾಯ ವಿಭಾಗದ ಸಹಾಯವಾಣಿಯನ್ನು ಸಂಪರ್ಕಿಸಬಹುದಾಗಿದೆ.

ಇಂದಿನಿಂದ ಹಾಲು, ಮೊಸರಿನ ದರ ಏರಿಕೆ

ಬೆಂಗಳೂರು, ಅ.31: ನಾಳೆಯಿಂದ ಕೇವಲ ಹಾಲಿನ ದರ ಹೆಚ್ಚಳವಾಗುವುದಿಲ್ಲ ಇದರ ಜೊತೆಗೆ ಮೊಸರಿನ ಬೆಲೆಯೋ 14 ರೂ. ಏರಿಕೆಯಾಗಲಿದೆ. ಕರ್ನಾಟಕ ಹಾಲು ಮಹಾಮಂಡಳ (ಕೆಎಂಎಫ್) ಈ ಕುರಿತು ಅಧಿಕೃತ ಪತ್ರಿಕಾ ಪ್ರಕಟಣೆ ಹೊರಡಿಸಿದ್ದು, ನವೆಂಬರ್ 1ರಿಂದ ಪರಿಷ್ಕೃತ ದರ ಜಾರಿಗೆ ಬರಲಿದೆ. ಎಲ್ಲಾ ಬ್ರ್ಯಾಂಡ್‌ಗಳ ಹಾಲಿನ ದರವನ್ನು ಏಕರೂಪದಲ್ಲಿ ಹೆಚ್ಚಿಸಲಾಗುತ್ತಿದೆ. ಇದರೊಂದಿಗೆ ನಿತ್ಯ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಖರೀದಿಸುವ ಕುಟುಂಬಗಳ ಮಾಸಿಕ ವೆಚ್ಚವೂ ಹೆಚ್ಚಾಗಲಿದೆ.

ಹಾಲಿಗಿಂತಲೂ ಮೊಸರಿನ ದರ ಏರಿಕೆ ಗ್ರಾಹಕರಿಗೆ ದೊಡ್ಡ ಆಘಾತ ನೀಡಿದೆ. ಸದ್ಯ ಕೆ.ಜಿ. ಮೊಸರಿಗೆ 54 ರೂಪಾಯಿ ಇದ್ದ ದರವನ್ನು ನಾಳೆಯಿಂದ 68 ರೂಪಾಯಿಗೆ ಹೆಚ್ಚಿಸಲಾಗುತ್ತಿದೆ. ಅಂದರೆ, ಪ್ರತಿ ಕೆ.ಜಿ. ಮೊಸರಿಗೆ ಬರೋಬ್ಬರಿ 14 ರೂಪಾಯಿ ಹೆಚ್ಚುವರಿ ಪಾವತಿಸಬೇಕಾಗುತ್ತದೆ.

ಅದೇ ರೀತಿ, ಅರ್ಧ ಲೀಟರ್ ಮೊಸರಿನ ಬೆಲೆಯೂ 28 ರೂಪಾಯಿಯಿಂದ 34 ರೂಪಾಯಿಗೆ ಏರಿಕೆಯಾಗಲಿದೆ. ಇದರಿಂದ ಅರ್ಧ ಲೀಟರ್ ಮೊಸರು ಖರೀದಿಸುವ ಗ್ರಾಹಕರು ಹೆಚ್ಚುವರಿಯಾಗಿ 6 ರೂಪಾಯಿ ಪಾವತಿಸಬೇಕಾಗುತ್ತದೆ. ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಜನರಿಗೆ ಹಾಲು ಮತ್ತು ಮೊಸರಿನ ದರ ಹೆಚ್ಚಳ ಮತ್ತಷ್ಟು ಹೊರೆಯಾಗಲಿದೆ.

ವಿಶೇಷವಾಗಿ ಮಕ್ಕಳಿರುವ ಕುಟುಂಬಗಳು, ಹೋಟೆಲ್‌ಗಳು, ಟೀ ಮತ್ತು ಕಾಫಿ ಅಂಗಡಿಗಳು ಹಾಗೂ ಹಾಲಿನ ಉತ್ಪನ್ನಗಳನ್ನು ಅವಲಂಬಿಸಿರುವ ಸಣ್ಣ ವ್ಯಾಪಾರಿಗಳಿಗೆ ಬೆಲೆ ಏರಿಕೆಯ ಪರಿಣಾಮ ಎದುರಾಗುವ ಸಾಧ್ಯತೆ ಇದೆ.ಒಟ್ಟಿನಲ್ಲಿ, ನವೆಂಬರ್ 1ರಿಂದ ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಖರೀದಿಸಲು ಗ್ರಾಹಕರು ಹೆಚ್ಚಿನ ಹಣ ತೆರಬೇಕಾಗಲಿದ್ದು, ಕೆಎಂಎಫ್‌ನ ದರ ಪರಿಷ್ಕರಣೆ ಜನಸಾಮಾನ್ಯರ ನಿತ್ಯದ ಖರ್ಚಿನ ಮೇಲೆ ಪರಿಣಾಮ ಬೀರಲಿದೆ.

ದೀಪಾವಳಿ ಹಬ್ಬದ ಹಿನ್ನೆಲೆ: ಸಾರಿಗೆ ಸಂಸ್ಥೆಯಿಂದ 2,600 ಹೆಚ್ಚುವರಿ ಬಸ್ ಸೇವೆ



ಬೆಂಗಳೂರು,ಅ.31: ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ದೀಪಾವಳಿ ಹಬ್ಬದ ಪ್ರಯುಕ್ತ 2,600 ಹೆಚ್ಚುವರಿ ಬಸ್ ವ್ಯವಸ್ಥೆಯನ್ನು ಕಲ್ಪಿಸಲಿದೆ. ನ.8 ರಂದು ನರಕಚತುರ್ದಶಿ, ನ.10 ರಂದು ಬಲಿಪಾಡ್ಯಮಿ ಇದ್ದು, ನ.7 ಮತ್ತು 8 ರಂದು ವಾರಾಂತ್ಯದ ದಿನಗಳಾಗಿವೆ.

ಪ್ರಯಾಣಿಕರ ಅನುಕೂಲಕ್ಕಾಗಿ ನ.6 ರಿಂದ ನ.8 ರವರೆಗೆ ನಗರದಿಂದ ರಾಜ್ಯ ಹಾಗೂ ಅಂತರಾಜ್ಯದ ವಿವಿಧ ಸ್ಥಳಗಳಿಗೆ 2,600 ಹೆಚ್ಚುವರಿ ವಿಶೇಷ ಬಸ್‌ಗಳ ಸೇವೆಯನ್ನು ಒದಗಿಸಲಾಗುವುದು ಎಂದು ಕೆಎಸ್‌ಆರ್‌ಟಿಸಿ ಪ್ರಕಟಣೆ ತಿಳಿಸಿದೆ. ರಾಜ್ಯ ಹಾಗೂ ಅಂತರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ನ.10 ಮತ್ತು ನ.11 ರಂದು ವಿಶೇಷ ಬಸ್‌ಗಳ ಸೇವೆಯನ್ನು ಒದಗಿಸಲಾಗುತ್ತದೆ.ಈ ಬಸ್‌ಗಳ ಸೇವೆಯು ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ಬಸ್ ನಿಲ್ದಾಣ, ಶಾಂತಿನಗರ ಟಿಟಿಎಂಸಿ ನಿಲ್ದಾಣಗಳಿಂದ ಒದಗಿಸಲಾಗುತ್ತದೆ.

ಮುಂಗಡ ಕಾಯ್ದಿರಿಸಿದ ಹೆಚ್ಚುವರಿ ವಾಹನಗಳನ್ನು ಬಿಎಂಟಿಸಿಯ ಶಾಂತಿನಗರ, ವಿಜಯನಗರ, ಯಶವಂತಪುರ ಟಿಟಿಎಂಸಿಗಳಲ್ಲಿ ಹಾಗೂ ಮಲ್ಲೇಶ್ವರಂ 18ನೇ ಕ್ರಾಸ್‌ನ ಬಸ್ ನಿಲ್ದಾಣ, ಬಸವೇಶ್ವರನಗರ ಬಸ್ ನಿಲ್ದಾಣ, ಎಲೆಕ್ಟ್ರಾನಿಕ್‌ಸಿಟಿ, ಅತ್ತಿಬೆಲೆ, ಟಿನ್ ಫ್ಯಾಕ್ಟರಿ ಮೊದಲಾದ ಸ್ಥಳಗಳಿಂದ ಒದಗಿಸಲಾಗುವುದು.

ಕೆಂಪೇಗೌಡ ಬಸ್ ನಿಲ್ದಾಣದಿಂದ ಉಡುಪಿ, ಕುಂದಾಪುರ, ಪುತ್ತೂರು, ಮಂಗಳೂರು, ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯ, ಶೃಂಗೇರಿ, ಹೊರನಾಡು, ಶಿವಮೊಗ್ಗ, ದಾವಣಗೆರೆ, ಗೋಕರ್ಣ, ಹಾಸನ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್, ತಿರುಪತಿ, ವಿಜಯವಾಡ, ಹೈದರಾಬಾದ್‌ಗಳಿಗೆ ಬಸ್ ಸೇವೆ ಇರಲಿದೆ.

ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಕೇರಿ ಮಾರ್ಗದ ಕಡೆ ಬಸ್ ಸೇವೆ ಒದಗಿಸಲಾಗುವುದು. ತಮಿಳುನಾಡು ಮತ್ತು ಕೇರಳ ಕಡೆಗೆ ಶಾಂತಿನಗರ ಬಿಎಂಟಿಸಿ ಬಸ್ ನಿಲ್ದಾಣದಿಂದ ವಿಶೇಷ ಬಸ್ ಸೌಲಭ್ಯವನ್ನು ಕಲ್ಪಿಸಲಾಗಿದೆ ಎಂದು ತಿಳಿಸಲಾಗಿದೆ.

ಬೆಂಗಳೂರು-ಮುಂಬೈ ವಂದೇಭಾರತ್ ಸ್ಲೀಪರ್ ರೈಲುಸೇವೆಗೆ ಇಂದು ಚಾಲನೆ

ಬೆಂಗಳೂರು, ಅ.31: ರಾಜಧಾನಿ ಬೆಂಗಳೂರು ಹಾಗೂ ವಾಣಿಜ್ಯ ನಗರಿ ಮುಂಬೈ ನಡುವೆ ಬಹುನಿರೀಕ್ಷಿತ ವಂದೇ ಭಾರತ್ ಸ್ಲೀಪರ್ ರೈಲು ಸೇವೆ ಶೀಘ್ರದಲ್ಲೇ ಆರಂಭಗೊಳ್ಳಲಿದ್ದು, ಈ ನೂತನ ರೈಲಿಗೆ ಬೆಂಗಳೂರಿನ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ (ಎಸ್‌ಎಂವಿಟಿ) ನಿಲ್ದಾಣದಲ್ಲಿ ಭಾನುವಾರ (ನ.1) ಬೆಳಿಗ್ಗೆ 9.45ಕ್ಕೆ ನಡೆಯಲಿರುವ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ರೈಲಿಗೆ ಹಸಿರು ನಿಶಾನೆ ತೋರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ, ಪ್ರಲ್ಹಾದ್ ಜೋಶಿ, ವಿ. ಸೋಮಣ್ಣ, ಶೋಭಾ ಕರಂದ್ಲಾಜೆ, ಸಂಸದರಾದ ಪಿ.ಸಿ. ಮೋಹನ್, ಕೃಷ್ಣ ಬೈರೇಗೌಡ, ತೇಜಸ್ವಿ ಸೂರ್ಯ, ಡಾ. ಸಿ.ಎನ್. ಮಂಜುನಾಥ್, ಲಹರ್ ಸಿಂಗ್ ಸಿರೋಯಾ, ಜಿ.ಸಿ. ಚಂದ್ರಶೇಖರ್, ಜಗ್ಗೇಶ್ ಹಾಗೂ ಸ್ಥಳೀಯ ಶಾಸಕರಾದ ಎಸ್. ರಘು ಸೇರಿದಂತೆ ಹಲವು ಜನಪ್ರತಿನಿಧಿಗಳು ಉಪಸ್ಥಿತರಿರಲಿದ್ದಾರೆ.



SUKRUTHI CHITRALAYA
THE MEENAKSHI COFFEE BAR
ನಾಡಿನ ಜನತೆಗೆ
ಕನ್ನಡ ರಾಜ್ಯೋತ್ಸವದ ಶುಭಾಶಯಗಳು
ಶೀಘ್ರದಲ್ಲೇ ಬಿಡುಗಡೆ...
ANUP REVANNA IN & AS
ಕನಕರಾಜ
FAN OF SIDDARAMAIAH
PRODUCED BY:
S.R.SANATHKUMAR
SENIOR CONGRESS LEADER, EX., DIRECTOR MSIL, PROPRIETOR: THE MEENAKSHI COFFEE BAR
CO-PRODUCED BY:
MANJUNATH URS
STORY-SCREENPLAY-DIALOGUES-LYRICS-MUSIC:
DR.NAGENDRA PRASAD
DIRECTEDBY:
R.RAVINDRA
K.M.PRAKASH / PROMAD BHARATIYA / THRILLERMANJU / BANDE CHANDRU
DHANANJAYA / YATISH / SRINIVAS / VENU / VENKATESH MAGADI / SUDHEENDRA VENKATESH / MANJU ADS
AUDIO ON
SUKRUTHI MUSIC
YOUTUBE CHANNEL
ENTIRE WORLD DISTRIBUTION:
MOVIE TIME DISTRIBUTORS: 9902620009